ಸಂಪುಟ: 11 ಸಂಚಿಕೆ: 157 ಪುಟ: 4+2 ಬೆಲೆ : 3.00 ಶನಿವಾರ ಜುಲೈ 25, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 157 Pages : 4+2 Rate : 3.00 Saturday July 25, 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## 92 ಮರಗಳ ತೆರವಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿ ಒಳಚರಂಡಿ ನೀರು ಶುದ್ಧೀಕರಣ ಘಟಕ (ಎಸ್‌ಟಿಪಿ Sewage Treatment Plant) ನಿರ್ಮಾಣ ಕಾಮಗಾರಿಗಾಗಿ ವಿವಿಧ ಜಾತಿಯ 92 ಮರಗಳನ್ನು ತೆರವುಗೊಳಿಸಲು ಉದ್ದೇಶಿಸಲಾಗಿದ್ದು, ಈ ಕುರಿತು ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗಿದೆ. ಮರಗಳ ತೆರವಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸಲು ಇಚ್ಛಿಸುವವರು ತಮ್ಮ ಲಿಖಿತ ಆಕ್ಷೇಪಣೆಗಳನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಗದಗ ಉಪ ವಿಭಾಗ ಹಾಗೂ ಮರ ಅಧಿಕಾರಿಗಳಿಗೆ ಗದಗದ ಬಿಂಕದಕಟ್ಟಿ ಕಚೇರಿಯಲ್ಲಿ ಆಗಸ್ಟ್ 5ರೊಳಗೆ ಸಲ್ಲಿಸಬಹುದಾಗಿದೆ. ನಿಗದಿತ ಅವಧಿಯೊಳಗೆ ಆಕ್ಷೇಪಣೆ ಸಲ್ಲಿಸದಿದ್ದಲ್ಲಿ, ನಂತರ ಬರುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ 08372-200978 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಗದಗ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಗದಗ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ತಾಂತ್ರಿಕ ಸಹಾಯಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 16ರಿಂದ 35 ವರ್ಷದ ಯುವಜನರಿಗೆ ಸದಸ್ಯತ್ವ; ಜು.31ರೊಳಗೆ ನೋಂದಣಿ ಪೂರ್ಣಗೊಳಿಸಲು ಡಿಸಿ ಸಿ.ಎನ್.ಶ್ರೀಧರ್ ಸೂಚನೆ

## ಪ್ರತಿ 4 ಸಾವಿರ ಜನರಿಗೆ ಭಾರತ್ ಜೋಡೋ ಯುವ ಸಂಘ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಯುವಜನರನ್ನು ನಾಯಕತ್ವ, ಕ್ರೀಡೆ, ಕೌಶಲ್ಯಾಭಿವೃದ್ಧಿ ಹಾಗೂ ಸಮಾಜಮುಖಿ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವ ಉದ್ದೇಶದಿಂದ ಪ್ರತಿ 4 ಸಾವಿರ ಜನಸಂಖ್ಯೆಗೆ ಒಂದರಂತೆ ಟಿಭಾರತ್ ಜೋಡೋ ಯುವ ಸಂಘಟಿಗಳನ್ನು ರಚಿಸಲು ಜಿಲ್ಲಾಡಳಿತ ಮುಂದಾಗಿದೆ. ಸಂಘಗಳ ನೋಂದಣಿ ಪ್ರಕ್ರಿಯೆಯನ್ನು ಜುಲೈ 31ರೊಳಗೆ ಪೂರ್ಣಗೊಳಿಸುವಂತೆ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಶುಕ್ರವಾರ ನಡೆದ ಭಾರತ್ ಜೋಡೋ ಯುವ ಸಂಘಗಳ ಸ್ಥಾಪನೆ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಧಿಕಾರಿಗಳು ಮಾತನಾಡಿ, 16ರಿಂದ 35 ವರ್ಷದೊಳಗಿನ ಯುವಕ-ಯುವತಿಯರು ಸಂಘದ ಸದಸ್ಯರಾಗಲು ಅರ್ಹರಾಗಿದ್ದು, ಪ್ರತಿ ಸಂಘದಲ್ಲಿ 15 ಸದಸ್ಯರ ಕಾರ್ಯಕಾರಿ ಸಮಿತಿ ರಚಿಸಲಾಗುವುದು. ಸಮಿತಿ ಸದಸ್ಯರನ್ನು ಲಾಟರಿ ಪದ್ಧತಿಯ ಮೂಲಕ ಆಯ್ಕೆ ಮಾಡಲಾಗುತ್ತದೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು ಹಾಗೂ ಸಾಮಾನ್ಯ ವರ್ಗಗಳಿಗೆ ಮೀಸಲಾತಿ ಕಲ್ಪಿಸಲಾಗಿದ್ದು, ಕಾರ್ಯಕಾರಿ ಸಮಿತಿಯಲ್ಲಿ ಯಾವುದೇ ಸದಸ್ಯರಿಗೆ ಸತತ ಎರಡು ಅವಧಿಗೆ ಅವಕಾಶ ಇರುವುದಿಲ್ಲ ಎಂದು ತಿಳಿಸಿದರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಮಾತನಾಡಿ, ರಾಜ್ಯಾದ್ಯಂತ 10 ಸಾವಿರ ಭಾರತ್ ಜೋಡೋ ಯುವ ಸಂಘಗಳನ್ನು ಸ್ಥಾಪಿಸುವ ಗುರಿ ಹೊಂದಲಾಗಿದೆ. ಜಿಲ್ಲೆಯಲ್ಲಿ ಸಂಘಗಳ ನೋಂದಣಿ ಪ್ರಕ್ರಿಯೆ ಆರಂಭವಾಗಿದ್ದು, ಆಬ್ಬಿಖಿ ಪೋರ್ಟಲ್, ಮೊಬೈಲ್ ಆ್ಯಪ್, ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಹಾಗೂ ನಾಗರಿಕ ಸೇವಾ ಕೇಂದ್ರಗಳ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿದರು.

ಅರ್ಜಿ ಸಲ್ಲಿಸಲು ಆಧಾರ್ ಕಡ್ಡಾಯವಾಗಿದ್ದು, ಸದಸ್ಯತ್ವಕ್ಕೆ 16ರಿಂದ 35 ವರ್ಷದೊಳಗಿನವರಾಗಿರಬೇಕು. ಒಂದು ಸಂಘ ರಚನೆಗೆ ಕನಿಷ್ಠ 100 ಸದಸ್ಯರು ಅಗತ್ಯವಿದ್ದು, ಸದಸ್ಯತ್ವ ನೋಂದಣಿ ಶುಲ್ಕ ₹10 ನಿಗದಿಪಡಿಸಲಾಗಿದೆ. ಸಂಘಗಳನ್ನು ಕರ್ನಾಟಕ ಸೊಸೈಟೀಸ್ ನೋಂದಣಿ ಕಾಯ್ದೆ-1960ರಡಿ ನೋಂದಾಯಿಸಬೇಕಿದ್ದು, ಜುಲೈ 31ರೊಳಗೆ ನೋಂದಣಿ ಪ್ರಕ್ರಿಯೆ ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ.

ಪ್ರತಿ ಸಂಘವು ಕ್ರೀಡೆ, ಫಿಟ್‌ನೆಸ್, ಪರಿಸರ ಸಂರಕ್ಷಣೆ, ಕೌಶಲ್ಯಾಭಿವೃದ್ಧಿ, ಸಮುದಾಯ ಸೇವೆ, ಬಾಲ್ಯ ವಿವಾಹ ತಡೆ, ಅಪೌಷ್ಟಿಕತೆ ನಿವಾರಣೆ ಸೇರಿದಂತೆ ಸಮಾಜಮುಖಿ ಕಾರ್ಯಕ್ರಮಗಳನ್ನು ಕೈಗೊಳ್ಳಲಿದ್ದು, ಎಲ್ಲಾ ಚಟುವಟಿಕೆಗಳ ವಿವರವನ್ನು ಜಿಯೋ-ಟ್ಯಾಗ್ ಫೋಟೋಗಳೊಂದಿಗೆ ಸಾಫ್ಟ್‌ವೇರ್‌ನಲ್ಲಿ ಅಪ್‌ಲೋಡ್ ಮಾಡಬೇಕು ಎಂದು ತಿಳಿಸಲಾಯಿತು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



> **ಯುವಶಕ್ತಿಯನ್ನು ಸಕಾರಾತ್ಮಕವಾಗಿ ಬಳಸಿಕೊಂಡರೆ ಸಮಾಜದಲ್ಲಿ ಉತ್ತಮ ಬದಲಾವಣೆ ತರಲು ಸಾಧ್ಯ. ಭಾರತ್ ಜೋಡೋ ಯುವ ಸಂಘಗಳು ಯುವಕರಲ್ಲಿ ನಾಯಕತ್ವ, ಶಿಸ್ತು ಹಾಗೂ ಸಾಮಾಜಿಕ ಬದ್ಧತೆಯನ್ನು ಬೆಳೆಸುವ ವೇದಿಕೆಯಾಗಬೇಕು. ಸಂಘಗಳ ರಚನೆ ಸಂಪೂರ್ಣ ಪಾರದರ್ಶಕವಾಗಿ ನಡೆಯಬೇಕು.**
> - **ಸಿ.ಎನ್. ಶ್ರೀಧರ್**, ಜಿಲ್ಲಾಧಿಕಾರಿ

## ಗದಗ ಪೊಲೀಸರ ಕರ್ತವ್ಯನಿಷ್ಠೆಗೆ ಗೌರವ: ಪಿಎಸ್‌ಐ ಮಾರುತಿ ಜೋಗದಂಡಕರ್, ಬಡಿಗೇರ, ಮಂಜುನಾಥ್‌ಗೆ ಡಿಜಿ-ಐಜಿಪಿ ಕಮೆಂಡೇಷನ್ ಡಿಸ್ಕ್ ಪ್ರದಾನ



**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿಷ್ಠೆ, ಪ್ರಾಮಾಣಿಕತೆ ಹಾಗೂ ದಕ್ಷ ಸೇವೆಗಾಗಿ ನೀಡಲಾಗುವ ಪ್ರತಿಷ್ಠಿತ ಡಿಜಿ-ಐಜಿಪಿ ಕಮೆಂಡೇಷನ್ ಡಿಸ್ಕ್ 2025-26 ಪ್ರಶಸ್ತಿಗೆ ಗದಗ ಜಿಲ್ಲೆಯ ಪಿಎಸ್ ಐ ಸೇರಿದಂತೆ ಸಿಬ್ಬಂದಿ ಭಾಜನರಾಗಿದ್ದಾರೆ. ಬೆಂಗಳೂರು ನಗರದ ಕೋರಮಂಗಲದಲ್ಲಿರುವ 3ನೇ ಪಡೆ ಕೆಎಸ್‌ಆರ್‌ಪಿ ಮೈದಾನದಲ್ಲಿ ಶುಕ್ರವಾರ ನಡೆದ ರಾಜ್ಯಮಟ್ಟದ ಗೌರವ ಪ್ರದಾನ ಹಾಗೂ ಪಥಸಂಚಲನ ಸಮಾರಂಭದಲ್ಲಿ ಬೆಟಗೇರಿ ಬಡಾವಣೆ ಠಾಣೆಯ ಪಿಎಸ್‌ಐ ಮಾರುತಿ ಜೋಗದಂಡರ್ಕ, ಗ್ರಾಮೀಣ ಪೊಲೀಸ್ ಠಾಣೆಯ ವಿಶ್ವನಾಥ ಬಡಿಗೇರ ಹಾಗೂ ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಎಸ್ಪಿ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ

'ಂಜುನಾಥ್ ಬಂಡಿಹಾಳ ಅವರಿಗೆ ರಾಜ್ಯ ಪೊಲೀಸ್ ಮಹಾನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರ (ಡಿಜಿ-ಐಜಿಪಿ) ವತಿಯಿಂದ ಪ್ರತಿಷ್ಠಿತ ಕಮೆಂಡೇಷನ್ ಡಿಸ್ಕ್ ಪ್ರದಾನ ಮಾಡಿ ಗೌರವಿಸಲಾಯಿತು. ರಾಜ್ಯದ ವಿವಿಧ ಜಿಲ್ಲೆಗಳ ಅತ್ಯುತ್ತಮ ಸೇವೆ ಸಲ್ಲಿಸಿದ ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಈ ಸಂದರ್ಭದಲ್ಲಿ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಆಕರ್ಷಕ ಪಥಸಂಚಲನ, ಶಿಸ್ತಿನ ಕವಾಯತು ಹಾಗೂ ಗೌರವ ವಂದನೆಯೊಂದಿಗೆ ಸಮಾರಂಭ ವೈಭವದಿಂದ ನಡೆಯಿತು.

ಕರ್ತವ್ಯ ನಿರ್ವಹಣೆಯಲ್ಲಿ ತೋರಿದ ದಕ್ಷತೆ, ಸಾರ್ವಜನಿಕ ಸೇವೆಯಲ್ಲಿನ ಬದ್ಧತೆ ಹಾಗೂ ಉತ್ತಮ ಕಾರ್ಯಕ್ಷಮತೆಯನ್ನು ಪರಿಗಣಿಸಿ ಈ ಪ್ರಶಸ್ತಿ ನೀಡಲಾಗಿದ್ದು, ಗದಗ ಜಿಲ್ಲಾ ಪೊಲೀಸ್ ಇಲಾಖೆಗೆ ಇದು ಹೆಮ್ಮೆಯ ಕ್ಷಣವಾಗಿದೆ. ಪ್ರಶಸ್ತಿ ಪುರಸ್ಕೃತ ಮೂವರು ಸಿಬ್ಬಂದಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಡಿಎಸ್ಪಿಗಳಾದ ಮುರ್ತುಜಾ ಖಾದ್ರಿ, ಸಜ್ಜನ ಹಾಗೂ ಸಹೋದ್ಯೋಗಿಗಳು ಹಾಗೂ ಸಾರ್ವಜನಿಕರು ಅಭಿನಂದನೆ ಸಲ್ಲಿಸಿದ್ದಾರೆ.

## ₹1 ಕೋಟಿ ಅಭಿವೃದ್ಧಿ ಕಾಮಗಾರಿಗೆ ಚಾಲನೆ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಶೀಗೇನಹಳ್ಳಿ-1 ಗ್ರಾಮದಲ್ಲಿ 2025-26ನೇ ಸಾಲಿನ ಕೆಕೆಆರ್‌ಡಿಬಿ (ಮೈಕ್ರೋ) ಯೋಜನೆಯಡಿ ₹1 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿರುವ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗೆ ಶಾಸಕ ಕೆ. ನೇಮಿರಾಜ ನಾಯ್ಕ್ ಭೂಮಿಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮೀಣ ಭಾಗದಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ರಾಜ್ಯ ಸರ್ಕಾರ ಆದ್ಯತೆ ನೀಡುತ್ತಿದ್ದು, ಗುಣಮಟ್ಟದ ರಸ್ತೆ ಮತ್ತು ಚರಂಡಿ ನಿರ್ಮಾಣದಿಂದ ಗ್ರಾಮಸ್ಥರ ಸಂಚಾರ ಹಾಗೂ ಸ್ವಚ್ಛತೆ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯಲಿದೆ ಎಂದು ಹೇಳಿದರು.



ಕಾರ್ಯಕ್ರಮದಲ್ಲಿ ಹೋಟೆಲ್ ಸಿದ್ದರಾಜ, ಬಣಕಾರ ಕೊಟ್ರೇಶ್, ಬ್ಯಾಟಿ ನಾಗರಾಜ್, ರಮೇಶ, ರಾಹುಲ್, ಎಸ್.ಎಂ. ಸಂಗಮೇಶ, ಕೊಳ್ಳಿ ವೆಂಕಣ್ಣ, ಪೂಜಾರ್ ಜಯಪ್ಪ, ಹರಿಜನ ಶೇಖ್ರಪ್ಪ, ಪೂಜಾರ್ ಚಂದ್ರಪ್ಪ, ಮಡ್ಲಿ ಮಹಮ್ಮದ್ ಸಾಬ್, ಪಿಂಜಾರ್ ರಾಜಸಾಬ್, ಸಿಂಧೂಗಿ ಶಿವಪ್ಪ, ರವಿ ಆಳವಂಡಿ, ಬಸವರಾಜ್, ಬಸವನಗೌಡ, ಪೂಜಾರ್ ಗೋಣೆಪ್ಪ, ರಮೇಶ ಪೂರ್ಜಾ, ಟಿ. ಮಲ್ಲಿಕಾರ್ಜುನ ಸೇರಿದಂತೆ ಗ್ರಾಮಸ್ಥರು ಹಾಗೂ ಮುಖಂಡರು ಉಪಸ್ಥಿತರಿದ್ದರು.

## 7.31 ಲಕ್ಷ ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಚುರುಕುಗೊಂಡಿದ್ದು, ಜುಲೈ 23ರ ವೇಳೆಗೆ ಜಿಲ್ಲೆಯ ಎಲ್ಲ 9,02,947 ಮತದಾರರಿಗೆ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸಲಾಗಿದೆ. ಅಲ್ಲದೆ, 7,31,875 ಎನ್ಯುಮರೇಷನ್ ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣಗೊಂಡಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

### ಮಾನವ ಸರಪಳಿ, ಟಯರ್‌ಗೆ ಬೆಂಕಿ ಹಚ್ಚಲು ಯತ್ನ; ರಾಹುಲ್ ಗಾಂಧಿ ವಿರುದ್ಧ ಘೋಷಣೆ

## ಕಾಂಗ್ರೆಸ್ ಸಿಜೆಪಿ ವಿರುದ್ಧ ಬಿಜೆಪಿ ಕಿಡಿ



> **ನೀಟ್ ಪರೀಕ್ಷೆಯಲ್ಲಿ ಅಕ್ರಮ ಎಸಗಿದವರ ವಿರುದ್ಧ ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಈಗಾಗಲೇ ಕ್ರಮ ಕೈಗೊಂಡಿದೆ. ಆದರೂ ಸುಖಾಸುಮ್ಮನೆ ಪ್ರತಿಭಟನೆ ನಡೆಸಿ ದೇಶದಲ್ಲಿ ಅರಾಜಕತೆ ಇದೆ ಎಂಬ ಭಾವನೆ ಮೂಡಿಸಲು ಕಾಂಗ್ರೆಸ್ ಯತ್ನಿಸುತ್ತಿದೆ.**
> - **ಕಳಕಪ್ಪ ಬಂಡಿ**, ಮಾಜಿ ಸಚಿವ

**ವಿಜಯಸಾಕ್ಷಿ ಸುದ್ದಿ, ಗದಗ**

ನೀಟ್ ಪರೀಕ್ಷೆ ಅಕ್ರಮ ಪ್ರಕರಣ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರ ಅಧಿಕೃತ ನಿವಾಸದ ಎದುರು ಕಾಂಗ್ರೆಸ್ ಮತ್ತು ಸಿಜೆಪಿ ನಡೆಸಿದ ಪ್ರತಿಭಟನೆ ಖಂಡಿಸಿ ಜಿಲ್ಲಾ ಬಿಜೆಪಿ ಘಟಕವು ಶುಕ್ರವಾರ ಗದಗ ನಗರದ ಗಾಂಧಿ ವೃತ್ತದಲ್ಲಿ ಭಾರಿ ಪ್ರತಿಭಟನೆ ನಡೆಸಿತು.

ಪ್ರತಿಭಟನೆಯ ವೇಳೆ ಕಾರ್ಯಕರ್ತರು ಮಾನವ ಸರಪಳಿ ನಿರ್ಮಿಸಿ ಕಾಂಗ್ರೆಸ್ ವಿರುದ್ಧ ಘೋಷಣೆಗಳನ್ನು ಕೂಗಿದರು. ಟಯರ್‌ಗೆ ಬೆಂಕಿ ಹಚ್ಚಲು ಯತ್ನಿಸಿದಾಗ ಪೊಲೀಸರು ತಡೆದರು.

ದೇಶವಿರೋಧಿ ಶಕ್ತಿಗಳಿಗೆ ಕಾಂಗ್ರೆಸ್ ಬೆಂಬಲ ನೀಡುತ್ತಿದೆ ಎಂದು ಆರೋಪಿಸಿದ ಪ್ರತಿಭಟನಾಕಾರರು, ದೇಶದ ಭದ್ರತೆ ವಿಚಾರದಲ್ಲಿ ರಾಜಕೀಯ ಮಾಡಬಾರದು ಎಂದು ಆಗ್ರಹಿಸಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಮಾಜಿ ಸಚಿವ ಕಳಕಪ್ಪ ಬಂಡಿ, ಪೊಲೀಸರ ಮೇಲೆ ಹಲ್ಲೆ ನಡೆಸುವವರನ್ನು ಯಾವುದೇ ಕಾರಣಕ್ಕೂ ಸಮರ್ಥಿಸಿಕೊಳ್ಳಲಾಗದು. ದೇಶದ ಭದ್ರತೆಗೆ ಧಕ್ಕೆ ತರುವ ಶಕ್ತಿಗಳ ವಿರುದ್ಧ ಕೇಂದ್ರ ಸರ್ಕಾರ ಕಠಿಣ ಕ್ರಮ ಕೈಗೊಳ್ಳುತ್ತಿದೆ. ಆದರೆ ಕಾಂಗ್ರೆಸ್ ನಾಯಕರು ರಾಜಕೀಯ ಲಾಭಕ್ಕಾಗಿ ಸುಳ್ಳು ಪ್ರಚಾರ ನಡೆಸುತ್ತಿದ್ದಾರೆ ಎಂದು ಆರೋಪಿಸಿದರು.

ಬಿಜೆಪಿ ಯುವ ಮುಖಂಡ ಉಮೇಶಗೌಡ ಪಾಟೀಲ ಮಾತನಾಡಿ, ಪ್ರಧಾನಿ ನಿವಾಸದ ಎದುರು ಪ್ರತಿಭಟನೆ ನಡೆಸುವ ಮೂಲಕ ದೇಶದ ಭದ್ರತೆಗೆ ಧಕ್ಕೆ ತರುವ ವಾತಾವರಣ ನಿರ್ಮಿಸಲು ಕಾಂಗ್ರೆಸ್ ಪ್ರಯತ್ನಿಸುತ್ತಿದೆ. ರಾಹುಲ್ ಗಾಂಧಿ ನೇತೃತ್ವದ ಕಾಂಗ್ರೆಸ್ ದೇಶದಲ್ಲಿ ಗೊಂದಲ ಸೃಷ್ಟಿಸುವ ರಾಜಕಾರಣ ಮಾಡುತ್ತಿದೆ ಎಂದು ಆರೋಪಿಸಿದರು.

ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ಎಂ.ಎಸ್. ಕರಿಗೌಡ್ರ ಮಾತನಾಡಿ, ಕಾಂಗ್ರೆಸ್ ದೇಶದಲ್ಲಿ ಅಶಾಂತಿ ಮತ್ತು ಗೊಂದಲದ ವಾತಾವರಣ ನಿರ್ಮಿಸಲು ಪ್ರಯತ್ನಿಸುತ್ತಿದೆ ಎಂದು ಟೀಕಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರುಡಗಿ, ನಗರಸಭೆ ಸದಸ್ಯ ಅನಿಲ ಅಬ್ಬಿಗೇರಿ, ರಾಘವೇಂದ್ರ ಯಳವತ್ತಿ ಸೇರಿದಂತೆ ಹಲವು ಮುಖಂಡರು ಮಾತನಾಡಿ, ದೇಶದ ಸಾರ್ವಭೌಮತ್ವಕ್ಕೆ ಧಕ್ಕೆ ತರುವ ಘಟನೆಗಳ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮುಖಂಡರಾದ ಅಶೋಕ ನವಲಗುಂದ, ಎಂ.ಎಂ. ಹಿರೇಮಠ, ವಿಜಯಕುಮಾರ ಗಡ್ಡಿ, ಜಯಶ್ರೀ ಉಗಲಾಟ, ಅರವಿಂದ ಹುಲ್ಲೂರ, ಶಿವರಾಜಗೌಡ ಹಿರೇಮನಿಪಾಟೀಲ, ಸೋಮು ಹುಡೇದಮನಿ, ವಿನಾಯಕ ಮಾನ್ವಿ, ಶಶಿಧರ ದಿಂಡೂರ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ್ದ ಬಿಜೆಪಿ ಪದಾಧಿಕಾರಿಗಳು ಹಾಗೂ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು.

## ಶಿರಹಟ್ಟಿ ಕ್ಷೇತ್ರದಲ್ಲಿ ಎಸ್‌ಐಆರ್‌ಗೆ ಶೇ.85.17 ಪ್ರಗತಿ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ನಡೆಯುತ್ತಿರುವ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಕಾರ್ಯದಲ್ಲಿ ಜುಲೈ 24ರ ವೇಳೆಗೆ ಶೇ.85.17ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಮತದಾರ ನೋಂದಣಾಧಿಕಾರಿ ಹಾಗೂ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ ನಂದಾ ಹಣಬರಟ್ಟಿ ತಿಳಿಸಿದ್ದಾರೆ. ಕ್ಷೇತ್ರದ 252 ಮತಗಟ್ಟೆ ವ್ಯಾಪ್ತಿಗಳಲ್ಲಿ ಒಟ್ಟು 2,30,258 ಎನ್ಯೂಮರೇಷನ್ ಫಾರ್ಮ್‌ಗಳನ್ನು ವಿತರಿಸಲಾಗಿದ್ದು, ಇದುವರೆಗೆ 1,96,118 ಫಾರ್ಮ್‌ಗಳ ಡಿಜಿಟೈಸೇಶನ್ ಪೂರ್ಣಗೊಂಡಿದೆ. ಜುಲೈ 23ರವರೆಗೆ 1,94,183 ಫಾರ್ಮ್‌ಗಳನ್ನು ಡಿಜಿಟೈಸೇಶನ್ ಮಾಡಲಾಗಿದ್ದು, ಜುಲೈ 24ರಂದು ಮತ್ತಷ್ಟು 1,935 ಫಾರ್ಮ್‌ಗಳನ್ನು ಡಿಜಿಟೈಸೇಶನ್ ಮಾಡಲಾಗಿದೆ. ಪ್ರಸ್ತುತ 7,120 ಫಾರ್ಮ್‌ಗಳ ಡಿಜಿಟೈಸೇಶನ್ ಬಾಕಿ ಇದ್ದು, ಶೀಘ್ರದಲ್ಲೇ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಅವರು ತಿಳಿಸಿದ್ದಾರೆ.

ಪರಿಶೀಲನೆ ವೇಳೆ 6,968 ಮಂದಿ ಮೃತಪಟ್ಟಿರುವುದು, 15,879 ಮಂದಿ ಸ್ಥಳಾಂತರಗೊಂಡಿರುವುದು, 3,079 ಮಂದಿ ಈಗಾಗಲೇ ಮತದಾರರ ಪಟ್ಟಿಯಲ್ಲಿ ನೋಂದಣಿಯಾಗಿರುವುದು, 1,052 ಮಂದಿ ಗೈರುಹಾಜರಾಗಿರುವುದು ಹಾಗೂ 52 ಪ್ರಕರಣಗಳು ಇತರೆ ಕಾರಣಗಳಿಗೆ ಸಂಬಂಧಿಸಿರುವುದು ಪತ್ತೆಯಾಗಿದೆ. ಒಟ್ಟು 27,030 ಪ್ರಕರಣಗಳನ್ನು ಪ್ರತ್ಯೇಕವಾಗಿ ದಾಖಲಿಸಲಾಗಿದೆ ಎಂದು ನಂದಾ ಹಣಬರಟ್ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ವಿಶೇಷ ಮತದಾರರ ಪರಿಷ್ಕರಣೆಯ ಮೊದಲ ಮ್ಯಾಪಿಂಗ್‌ನಲ್ಲೇ 1.20 ಲಕ್ಷ ಹೆಸರು ಕೈಬಿಟ್ಟಿರುವ ಆರೋಪ | ಚುನಾವಣಾ ಆಯೋಗಕ್ಕೆ ವೆಲ್ಫೇರ್ ಪಾರ್ಟಿ ಮನವಿ

# 1.20 ಲಕ್ಷ ಆದಿವಾಸಿ ಮತದಾರರ ಹೆಸರು ಕೈಬಿಟ್ಟ ಆರೋಪ




**ವಿಜಯಸಾಕ್ಷಿ ಸುದ್ದಿ, ಹುಣಸೂರು**

ರಾಜ್ಯದ ಪಶ್ಚಿಮಘಟ್ಟ ಪ್ರದೇಶದ ಒಂಬತ್ತು ಜಿಲ್ಲೆಗಳ 38 ತಾಲೂಕುಗಳ 1,500ಕ್ಕೂ ಹೆಚ್ಚು ಹಾಡಿ, ಪೋಡು ಹಾಗೂ ದೊಡ್ಡಿಗಳಲ್ಲಿ ವಾಸಿಸುತ್ತಿರುವ ಸುಮಾರು ಮೂರು ಲಕ್ಷ ಆದಿವಾಸಿ ಮತದಾರರ ಪೈಕಿ ಸುಮಾರು 1.20 ಲಕ್ಷ ಮತದಾರರ ಹೆಸರುಗಳು ವಿಶೇಷ ಮತದಾರರ ತೀವ್ರ ಪರಿಷ್ಕರಣೆ (ಎಸ್‌ಐಆರ್) ಮೊದಲ ಮ್ಯಾಪಿಂಗ್ ಪ್ರಕ್ರಿಯೆಯಲ್ಲಿಯೇ ಕೈಬಿಟ್ಟಿರುವುದು ತೀವ್ರ ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ಕರ್ನಾಟಕ ರಾಜ್ಯಾಧ್ಯಕ್ಷ ಅಡ್ವೊಕೇಟ್ ತಾಹೇರ್ ಹುಸೇನ್ ಆರೋಪಿಸಿದರು.

ಹುಣಸೂರಿನ ಡೀಡ್ (DEED) ಸಂಸ್ಥೆಯ ತರಬೇತಿ ಸಭಾಂಗಣದಲ್ಲಿ ಆಯೋಜಿಸಿದ್ದ ಎಸ್‌ಐಆರ್ ಕುರಿತು ತರಬೇತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆದಿವಾಸಿ ಸಮುದಾಯದ ಪರವಾಗಿ ವೆಲ್ಫೇರ್ ಪಾರ್ಟಿ ವತಿಯಿಂದ ರಾಜ್ಯ ಚುನಾವಣಾ ಆಯೋಗಕ್ಕೆ ಮನವಿ ಸಲ್ಲಿಸಲಾಗಿದ್ದು, ಯಾವುದೇ ಅರ್ಹ ಮತದಾರ ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಲಾಗಿದೆ ಎಂದು ತಿಳಿಸಿದರು.

ಹುಣಸೂರು ಉಪವಿಭಾಗದಲ್ಲಿಯೇ ಸುಮಾರು 15 ಸಾವಿರ ಆದಿವಾಸಿ ಮತದಾರರ ಹೆಸರುಗಳು ಮೊದಲ ಮ್ಯಾಪಿಂಗ್‌ನಲ್ಲೇ ಕೈಬಿಟ್ಟಿರುವುದು ಕಳವಳಕಾರಿ ಸಂಗತಿಯಾಗಿದೆ. ಅಲ್ಲದೆ, ಅನೇಕ ಆದಿವಾಸಿಗಳ ಬಳಿ ಅಗತ್ಯ ದಾಖಲೆಗಳ ಕೊರತೆಯಿಂದ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆ ಹಾಗೂ ದೃಢೀಕರಣ ಪ್ರಕ್ರಿಯೆಯಲ್ಲಿ ಗಂಭೀರ ಸಮಸ್ಯೆಗಳು ಎದುರಾಗುತ್ತಿವೆ ಎಂದು ಅವರು ಹೇಳಿದರು.

ಈ ಸಂಬಂಧ ಚುನಾವಣಾ ಆಯುಕ್ತರೊಂದಿಗೆ ನೇರವಾಗಿ ಚಆರ್‌ಸಿ ಆದಿವಾಸಿ ಸಮುದಾಯದ ಆತಂಕಗಳನ್ನು ಅವರ ಗಮನಕ್ಕೆ ತರಲಾಗುವುದು. ಯಾವುದೇ ಅರ್ಹ ಮತದಾರ ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಲಾಗುವುದು ಎಂದು ತಾಹೇರ್ ಹುಸೇನ್ ತಿಳಿಸಿದರು.

ಕಾರ್ಯಕ್ರಮದಲ್ಲಿ ಆದಿವಾಸಿ ಮುಖಂಡರಾದ ಜೆಡಿ ಜಯಪ್ಪ, ಕೊವಿಗೆ ಜಯಪ್ಪ, ಬಸವರಾಜು, ಶಿವಣ್ಣ, ವಿಠಲ್ ಲಕ್ಷ್ಮಿ, ಮಾಸ್ತಮ್ಮ ಸೀತೆ, ಅಮ್ಮಣಿ ಸಾಕಮ್ಮ, ಕಲ್ಲೂರಯ್ಯ, ದಲಿತ ಚಳುವಳಿಯ ಮುಖಂಡ ಹರಿಹರ ಆನಂದಸ್ವಾಮಿ, ಪ್ರೊ. ಸಿದ್ದೇಗೌಡ, ನಿವೃತ್ತ ಅಧಿಕಾರಿ ಬಾಲಕೃಷ್ಣ, ಬುದ್ಧ ಸಂಘಟನೆಯ ಹನುಮಯ್ಯ, ಮಹಿಳಾ ಸಂಘಟನೆಯ ಸೋಮನಹಳ್ಳಿ ರುಕ್ಮಿಣಿ, ಎಂಎಸ್ ಡಬ್ಲ್ಯು ವಿದ್ಯಾರ್ಥಿಗಳಾದ ಪ್ರಮೋದ್, ಬೈರವ, ಯೋಗೇಶ್, ಎಚ್.ಡಿ. ಕೋಟೆಯ ರಾಜಣ್ಣ, ರಾಜಪ್ಪ, ರವಿ, ಪಿರಿಯಾಪಟ್ಟಣದ ಲಿಂಗಪ್ಪ, ಮಾನವ ಮಂದಿರದ ಮಾರದೂರ್ ಶ್ರೀಕಂಠ, ಬೆಂಗಳೂರಿನ ಹರೀಶ್, ಡೀಡ್‌ನ ಪ್ರಕಾಶ್ ಹಾಗೂ ಶಾರದಾ ಸೇರಿದಂತೆ ಹಲವರು ಭಾಗವಹಿಸಿದ್ದರು.

ಆದಿವಾಸಿ ಜನತಾ ಪಾರ್ಲಿಮೆಂಟ್ ಅಧ್ಯಕ್ಷ ಹರ್ಷ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

## ಸಂಕ್ಷಿಪ್ತ ಸುದ್ದಿಗಳು

## ಕ್ರೀಡಾ ಕಲ್ಯಾಣ ಯೋಜನೆಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಸಾಲಿನ ಕ್ರೀಡಾ ಕಲ್ಯಾಣ ಯೋಜನೆ ಅಡಿಯಲ್ಲಿ ಅಂತರರಾಷ್ಟ್ರೀಯ, ರಾಷ್ಟ್ರೀಯ ಹಾಗೂ ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ವಿವಿಧ ಯೋಜನೆಗಳಡಿ ಪ್ರೋತ್ಸಾಹಧನ ಹಾಗೂ ಪ್ರಶಸ್ತಿಗಳನ್ನು ನೀಡಲು ಅರ್ಜಿ ಆಹ್ವಾನಿಸಲಾಗಿದೆ.ಯೋಜನೆಯಡಿ ಏಕಲವ್ಯ ಪ್ರಶಸ್ತಿ, ಜೀವಮಾನ ಸಾಧನೆ ಪ್ರಶಸ್ತಿ, ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ, ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ, ಗುರಿ ಒಲ್ಲಿಂಪಿಕ್ ಪದಕ, ನಗದು ಪುರಸ್ಕಾರ, ಶೈಕ್ಷಣಿಕ ಶುಲ್ಕ ಮರುಪಾವತಿ ಹಾಗೂ ಕ್ರೀಡಾ ವಿದ್ಯಾರ್ಥಿವೇತನ ನೀಡಲಾಗುವುದು.ಆಸಕ್ತ ಕ್ರೀಡಾಪಟುಗಳು ಜುಲೈ 31ರೊಳಗೆ ಸೇವಾ ಸಿಂಧು ಪೋರ್ಟಲ್ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು.ಹೆಚ್ಚಿನ ಮಾಹಿತಿಗಾಗಿ ಗದಗ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಚೇರಿಯನ್ನು ಸಂಪರ್ಕಿಸುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನ್ಮದಿನದ ಅಂಗವಾಗಿ ಡಾ.ಬಸವರಾಜ ಬಳ್ಳಾರಿಗೆ ಸನ್ಮಾನ




**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ನೌಕರ ಸಂಘದ ಅಧ್ಯಕ್ಷರು, ರಾಜ್ಯ ನೌಕರ ಸಂಘದ ಉಪಾಧ್ಯಕ್ಷರು ಹಾಗೂ ಗದಗ ಬಿಸಿಎಂ ತಾಲೂಕು ಅಧಿಕಾರಿಯಾಗಿರುವ ಡಾ. ಬಸವರಾಜ ಬಳ್ಳಾರಿ ಅವರನ್ನು ಜನ್ಮದಿನದ ಅಂಗವಾಗಿ ಕಂಬಳಿ ಹೊದಿಸಿ ಸನ್ಮಾನಿಸಿ ಶುಭ ಹಾರೈಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಪ್ರಕೊಷ್ಠಗಳ ಸಹ ಸಂಯೋಜಕ ರಮೇಶ ಎನ್. ಸಜ್ಜಗಾರ, ಹಾಲುಮತ ಸಮಾಜದ ಮುಖಂಡ ಶಿವು ಡಂಬಳ, ದರ್ಶನ, ರಾಮು ಗಡಾದ, ನಿವೃತ್ತ ಶಿಕ್ಷಕ ಚಂದ್ರಶೇಖರ ಚೋರಗಸ್ತಿ, ಮಂಜುನಾಥ ಕೌಜಗೇರಿ, ಮೈಲಾರಲಿಂಗಪ್ಪ ಪೂಜಾರಿ, ಫಕ್ಕಿರಪ್ಪ ಗೊರವರ ಸೇರಿದಂತೆ ಹಲವರು ಉಪಸ್ಥಿತರಿದ್ದು, ಡಾ. ಬಸವರಾಜ ಬಳ್ಳಾರಿ ಅವರ ಸಾರ್ವಜನಿಕ ಸೇವೆಯನ್ನು ಶ್ಲಾಘಿಸಿ ಶುಭಾಶಯ ಕೋರಿದರು.

## ಕೇಂದ್ರ ಶಿಕ್ಷಣ ಸಚಿವರ ರಾಜೀನಾಮೆಗೆ ಆಗ್ರಹ

**ವಿಜಯಸಾಕ್ಷಿ ಸುದ್ದಿ, ಗದಗ**



ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣ ಹಾಗೂ ಪ್ರತಿಭಟನೆ ನಡೆಸುತ್ತಿದ್ದ ವಿದ್ಯಾರ್ಥಿಗಳ ಮೇಲಿನ ಪೊಲೀಸ್ ಕ್ರಮವನ್ನು ಖಂಡಿಸಿರುವ ಗದಗ ಜಿಲ್ಲಾ ಮಾದಿಗರ ಸಮಾನತೆ ಸಮಿತಿಯ ಜಿಲ್ಲಾಧ್ಯಕ್ಷ ಯುವರಾಜ ಬಳ್ಳಾರಿ, ಕೇಂದ್ರ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪತ್ರಿಕಾ ಹೇಳಿಕೆ ನೀಡಿರುವ ಅವರು, ನೀಟ್ ಪ್ರಶ್ನೆಪತ್ರಿಕೆ ಸೋರಿಕೆಯಿಂದ ಪ್ರತಿಭಾವಂತ ಹಾಗೂ ಬಡ ವಿದ್ಯಾರ್ಥಿಗಳ ಭವಿಷ್ಯಕ್ಕೆ ಅನ್ಯಾಯವಾಗಿದ್ದು, ಕಠಿಣ ಪರಿಶ್ರಮದಿಂದ ಸರ್ಕಾರಿ ಉದ್ಯೋಗ ಪಡೆಯುವ ಕನಸು ಕಂಡ ಸಾವಿರಾರು ವಿದ್ಯಾರ್ಥಿಗಳ ವಿಶ್ವಾಸಕ್ಕೆ ಧಕ್ಕೆಯಾಗಿದೆ ಎಂದು ಆರೋಪಿಸಿದರು.

ದೆಹಲಿ ಜಂತರ್ ಮಂತರ್‌ನಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆಯ ವೇಳೆ ಪೊಲೀಸ್ ಲಾಠಿಚಾರ್ಜ್ ನಡೆದಿದ್ದು, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರು ಈ ಪ್ರಕರಣದ ನೈತಿಕ ಹೊಣೆ ಹೊತ್ತು ತಕ್ಷಣ ರಾಜೀನಾಮೆ ನೀಡಬೇಕು. ಇಲ್ಲವಾದರೆ ಪ್ರಧಾನಮಂತ್ರಿ, ನರೇಂದ್ರ ಮೋದಿ ಅವರು ಅವರನ್ನು ಸಂಪುಟದಿಂದ ವಜಾಗೊಳಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಮೃತಪಟ್ಟಿದ್ದಾರೆ ಎಂದು ವರದಿಯಾಗಿರುವ ವಿದ್ಯಾರ್ಥಿಗಳ ಕುಟುಂಬಗಳಿಗೆ ತಲಾ ₹1 ಕೋಟಿ ಪರಿಹಾರ ನೀಡಬೇಕು. ಗಾಯಗೊಂಡ ವಿದ್ಯಾರ್ಥಿಗಳಿಗೆ ಸಮರ್ಪಕ ಚಿಕಿತ್ಸೆ ಹಾಗೂ ಸೂಕ್ತ ಪರಿಹಾರ ಘೋಷಿಸಬೇಕು ಎಂದು ಅವರು ಆಗ್ರಹಿಸಿದರು.

ವಿದ್ಯಾರ್ಥಿಗಳ ಪರವಾಗಿ ಹೋರಾಟ ನಡೆಸುತ್ತಿರುವ ಸಾಮಾಜಿಕ ಹೋರಾಟಗಾರರ ವಿರುದ್ಧ ದಮನಾತ್ಮಕ ಕ್ರಮ ಕೈಗೊಳ್ಳುವುದು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ವಿರುದ್ಧವಾಗಿದೆ ಎಂದು ಆರೋಪಿಸಿದ ಅವರು, ಕೇಂದ್ರ ಸರ್ಕಾರ ಈ ವಿಷಯದಲ್ಲಿ ನಿರ್ಲಕ್ಷ್ಯ ಮುಂದುವರಿಸಿದರೆ ದೇಶಾದ್ಯಂತ ವಿದ್ಯಾರ್ಥಿಗಳು, ಯುವಜನರು, ಪ್ರಗತಿಪರ ಚಿಂತಕರು ಹಾಗೂ ದಲಿತ ಪರ ಸಂಘಟನೆಗಳು ಉಗ್ರ ಹೋರಾಟ ನಡೆಸಲಿವೆ ಎಂದು ಎಚ್ಚರಿಕೆ ನೀಡಿದರು.

## ಕೇಂದ್ರ ಶಿಕ್ಷಣ ಸಚಿವರ ರಾಜೀನಾಮೆಗೆ ಆಗ್ರಹಿಸಿ ಮನವಿ



**ವಿಜಯಸಾಕ್ಷಿ ಸುದ್ದಿ, ಗದಗ**

ನೀಟ್ ಪ್ರಶ್ನೆಪತ್ರಿಕೆ ಸೋರಿಕೆ ಪ್ರಕರಣದ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ದಸಂಸ) ಗದಗ ಜಿಲ್ಲಾ ಶಾಖೆಯು ಜಿಲ್ಲಾಧಿಕಾರಿಗಳ ಮೂಲಕ ಪ್ರಧಾನಮಂತ್ರಿಗೆ ಮನವಿ ಸಲ್ಲಿಸಿತು.

ಜಿಲ್ಲಾ ಸಂಚಾಲಕ ರಮೇಶ ಎಚ್. ಬಾಳಮ್ಮನವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ, ನೀಟ್ ಹಗರಣದಿಂದ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದ್ದು, ದೆಹಲಿಯ ಜಂರ್ತ–ಮಂತರ್‌ನಲ್ಲಿ ಪ್ರತಿಭಟನೆ ನಡೆಸಿದ ವಿದ್ಯಾರ್ಥಿಗಳ ಮೇಲಿನ ಪೊಲೀಸ್ ಲಾಠಿಚಾರ್ಜ್ ಖಂಡನೀಯ ಎಂದು ಆರೋಪಿಸಲಾಯಿತು.ಈ ಸಂದರ್ಭದಲ್ಲಿ ಪ್ರಕಾಶ ಕೇಲೂರ, ಬಸವರಾಜ ಸತ್ಯಮ್ಮನವರ, ಮಲ್ಲಪ್ಪ ಕಳಸಾಪೂರ, ಮಂಜಪ್ಪ ಬಾಳಮ್ಮನವರ, ಶ್ರೀಕಾಂತ ತಿರಕಣ್ಣವರ, ಹನಮಂತ ಪೂಜಾರ, ಅಶೋಕ ತಾಳದವರ, ವಿಜಯ ಚಲವಾದಿ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಪ್ರತಿ ಗ್ರಾಮಕ್ಕೂ ಗುಣಮಟ್ಟದ ರಸ್ತೆ-ಚರಂಡಿ ಸೌಲಭ್ಯ: ಶಾಸಕ ನೇಮಿರಾಜ್ ನಾಯ್ಕ್




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಕ್ಷೇತ್ರದ ಪ್ರತಿಯೊಂದು ಗ್ರಾಮಕ್ಕೂ ಗುಣಮಟ್ಟದ ರಸ್ತೆ ಹಾಗೂ ಚರಂಡಿ ಸೌಲಭ್ಯ ಕಲ್ಪಿಸುವ ಮೂಲಕ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಶಾಸಕ ಕೆ. ನೇಮಿರಾಜ್ ನಾಯ್ಕ್ ಹೇಳಿದರು.

ತಾಲೂಕಿನ ಬೆಣ್ಣೆಕಲ್ಲು ಗ್ರಾಮದಲ್ಲಿ ಮುಖ್ಯಮಂತ್ರಿ ಮೂಲಸೌಕರ್ಯ ಅಭಿವೃದ್ಧಿ ಯೋಜನೆಯ ವಿಶೇಷ ಘಟಕ ಯೋಜನೆಯಡಿ ₹50 ಲಕ್ಷ ವೆಚ್ಚದ ಸಿಸಿ ರಸ್ತೆ ಹಾಗೂ ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಗುತ್ತಿಗೆದಾರರು ಕಾಮಗಾರಿ ವೇಳೆ ಗುಣಮಟ್ಟದ ನಿರ್ಮಾಣ ಸಾಮಗ್ರಿಗಳನ್ನು ಬಳಸಬೇಕು. ಕಾಮಗಾರಿ ಪೂರ್ಣಗೊಂಡ ಕೆಲವೇ ದಿನಗಳಲ್ಲಿ ರಸ್ತೆಗಳು ಹಾಳಾಗುವಂತಹ ಕಳಪೆ ಕಾಮಗಾರಿ ನಡೆದರೆ ಸಂಬಂಧಿಸಿದವರ ವಿರುದ್ಧ ಕ್ರಮ ಕೈಗೊಂಡು ಬಿಲ್ ತಡೆಹಿಡಿಯಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸರ್ಕಾರಿ ಕಾಮಗಾರಿಗಳು ಸಾರ್ವಜನಿಕರ ಆಸ್ತಿಯಾಗಿರುವುದರಿಂದ ಗ್ರಾಮಸ್ಥರೂ ಗುಣಮಟ್ಟದ ಕಾಮಗಾರಿಗೆ ಕಣ್ಗಾವಲು ವಹಿಸಬೇಕು. ಯಾವುದೇ ಲೋಪದೋಷ ಕಂಡುಬಂದರೆ ತಕ್ಷಣ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಬಿ.ಹೆಚ್.ಎಂ. ಶಿವಬಸಯ್ಯ, ಮಡಿವಾಳರ ಪರಸಪ್ಪ, ಹರಿಣಿ ಕಾಲೇಜಿನ ಮುಖ್ಯಸ್ಥ ಕೊಟ್ರೇಶ್, ಬಿ.ಟಿ. ಹಣಮಂತ, ಹೆಚ್. ಪ್ರಕಾಶ್, ಡಿ. ಕಾಳನಗೌಡ, ಕಲ್ಲಪ್ಪರ ಮಂಜು, ಬಾರಿಕರ ನೀಲಪ್ಪ, ಉಪ್ಪಾರ ತಿಂದಪ್ಪ, ಕಂದಗಲ ಕೊಟ್ರೇಶ್, ಪತ್ರಕರ್ತ ಕೋವಿ ಸೋಮಶೇಖರ್, ಜೆಡಿಎಸ್ ಕ್ಷೇತ್ರಾಧ್ಯಕ್ಷ ವೈ. ಮಲ್ಲಿಕಾರ್ಜುನ, ಲೋಕೋಪಯೋಗಿ ಇಲಾಖೆಯ ಸಹಾಯಕ ಅಭಿಯಂತರ ಬಿ.ಎಚ್. ಅರ್ಚನಾ, ಶಾಸಕರ ಆಪ್ತ ಸಹಾಯಕ ಬ್ಯಾಟಿ ನಾಗರಾಜ್, ಹೋಟೆಲ್ ಸಿದ್ಧರಾಜು ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಜಿಲ್ಲಾಸ್ಪತ್ರೆಗೆ ಫಿಜಿಯೋಥೆರಪಿ ಉಪಕರಣಗಳ ಕೊಡುಗೆ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಸ್ಪತ್ರೆಯಲ್ಲಿರುವ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ (ಕೆಎಂಎಚ್‌ಐ) ಕ್ಲಿನಿಕ್‌ಗೆ ಫಿಜಿಯೋಥೆರಪಿಗೆ ಅಗತ್ಯವಿರುವ ವಿವಿಧ ಉಪಕರಣಗಳನ್ನು ಉಜ್ಜೀವನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ವತಿಯಿಂದ ಕೊಡುಗೆಯಾಗಿ ನೀಡಲಾಯಿತು. ಶ್ರೀ ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಮಹಾವಿದ್ಯಾಲಯದ ಕೆಎಂಎಚ್‌ಐ ಕ್ಲಿನಿಕ್‌ನಲ್ಲಿ ನಡೆದ ಕಾರ್ಯಕ್ರಮದಲ್ಲಿ ಉಪಕರಣಗಳನ್ನು ಲೋಕಾರ್ಪಣೆ ಮಾಡಲಾಯಿತು. ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಕಾರ್ಯಕ್ರಮದ ಅನುಷ್ಠಾನಾಧಿಕಾರಿ ಹಾಗೂ ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಜಿ.ಎಸ್. ಪಲ್ಲೇದ, ಸರ್ಕಾರದೊಂದಿಗೆ ಖಾಸಗಿ ಸಂಸ್ಥೆಗಳು ಹಾಗೂ ಬ್ಯಾಂಕ್‌ಗಳು ಸಾಮಾಜಿಕ ಹೊಣೆಗಾರಿಕೆಯಡಿ ಆರೋಗ್ಯ ಕ್ಷೇತ್ರಕ್ಕೆ ನೆರವು ನೀಡಿದರೆ ಸಾರ್ವಜನಿಕರಿಗೆ ಇನ್ನಷ್ಟು ಗುಣಮಟ್ಟದ ಸೇವೆ ಒದಗಿಸಲು ಸಾಧ್ಯವಾಗುತ್ತದೆ ಎಂದು ಹೇಳಿದರು. ಉಜ್ಜೀವನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ನೀಡಿರುವ ಕೊಡುಗೆ ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಬಳಿಕ ಕೆಎಂಎಚ್‌ಐ ಕಾರ್ಯಕ್ರಮದ ಫಿಜಿಯೋಥೆರಪಿಸ್ಟ್ ಡಾ. ಅಶ್ವಿನಿ ಎಂ. ಕುರಿ ಅವರು ಕೊಡುಗೆಯಾಗಿ ನೀಡಲಾದ ಫಿಜಿಯೋಥೆರಪಿ ಉಪಕರಣಗಳ ಉಪಯೋಗ ಹಾಗೂ ಅವುಗಳಿಂದ ರೋಗಿಗಳಿಗೆ ಆಗುವ ಅನುಕೂಲಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಬಿ.ಎಸ್. ಕರಿಗೌಡರ, ಉಜ್ಜೀವನ ಸ್ಮಾಲ್ ಫೈನಾನ್ಸ್ ಬ್ಯಾಂಕ್ ವ್ಯವಸ್ಥಾಪಕ ಮಂಜುನಾಥ ಮಂಟೂರ, ಎಲುಬು–ಕೀಲು ವಿಭಾಗದ ಮುಖ್ಯಸ್ಥ ಡಾ. ಮಹಾಂತೇಶ ಪಾಟೀಲ, ವೈದ್ಯಕೀಯ ವಿಭಾಗದ ಮುಖ್ಯಸ್ಥ ಡಾ. ಸಂಗಮೇಶ ಅಸೂಟಿ, ಕ್ಷಯರೋಗ ವಿಭಾಗದ ಮುಖ್ಯಸ್ಥ ಡಾ. ಅರುಣಕುಮಾರ, ಕೆಎಂಎಚ್‌ಐ ಕಾರ್ಯಕ್ರಮದ ಸಿಬ್ಬಂದಿ ಹಾಗೂ ಜಿಲ್ಲಾ ಕುಷ್ಠರೋಗ ವಿಭಾಗದ ಸಿಬ್ಬಂದಿ ಉಪಸ್ಥಿತರಿದ್ದರು. ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಕಾರ್ಯಕ್ರಮ ನಿರೂಪಿಸಿದರು. ಪ್ರವೀಣ ಎಸ್. ರೋಣ ವಂದಿಸಿದರು.

## ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಮಹಿಳಾ ಘಟಕದಿಂದ ದತ್ತಿ ಉಪನ್ಯಾಸ; ಸಾಧಕಿಯರು, ನೀಟ್ ವಿದ್ಯಾರ್ಥಿನಿಗೆ ಸನ್ಮಾನ

# ಮಾನಸಿಕ ಆರೋಗ್ಯ ಕಾಪಾಡಿಕೊಳ್ಳುವುದು ಇಂದಿನ ಅಗತ್ಯ



**ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ವೇಗದ ಜೀವನಶೈಲಿಯಲ್ಲಿ ಹೆಚ್ಚುತ್ತಿರುವ ಮಾನಸಿಕ ಒತ್ತಡವನ್ನು ಸಮರ್ಥವಾಗಿ ನಿಭಾಯಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಉತ್ತಮ ಮಾನಸಿಕ ಆರೋಗ್ಯವೇ ಸುಖೀ ಜೀವನದ ಮೂಲಾಧಾರ ಎಂದು ಮನೋವೈದ್ಯ ಡಾ. ಶ್ಯಾಮಸುಂದರ ಬಿ. ಹೇಳಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ವತಿಯಿಂದ ನಗರದ ಶ್ರೀ ಬನಪ್ಪ ಸಂಕಪ್ಪ ಸಂಕಣ್ಣವರ ಸಭಾಭವನದಲ್ಲಿ ಆಯೋಜಿಸಿದ್ದ ದಿವಂಗತ ಬಸವಣ್ಣೆಪ್ಪ ಹುಬ್ಬಳ್ಳಿ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ಇಂದಿನ ಜೀವನದಲ್ಲಿ ಹೆಚ್ಚುತ್ತಿರುವ ಮಾನಸಿಕ ಒತ್ತಡಕ್ಕೆ ಕಾರಣವಾಗುವ ಅಂಶಗಳು, ಅದರ ದುಷ್ಪರಿಣಾಮಗಳು ಹಾಗೂ ಪರಿಹಾರ ಮಾರ್ಗಗಳ ಕುರಿತು ಅವರು ಸವಿಸ್ತಾರವಾಗಿ ಮಾಹಿತಿ ನೀಡಿದರು. ಕುಟುಂಬ ಮತ್ತು ಸಮಾಜದಲ್ಲಿ ಮಾನಸಿಕ ನೆಮ್ಮದಿ ಕಾಪಾಡಿಕೊಳ್ಳುವ ಮಹತ್ವವನ್ನು ವಿವರಿಸಿದ ಅವರ ಉಪನ್ಯಾಸ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಿಳಾ ಘಟಕದ ಅಧ್ಯಕ್ಷೆ ಜ್ಯೋತಿ ಆರ್. ದಾನಪ್ಪಗೌಡ್ರ ವಹಿಸಿದ್ದರು. ಇದೇ ಸಂದರ್ಭದಲ್ಲಿ ಸುವರ್ಣ ಮದರಿಮಠ ಅವರನ್ನು ಸನ್ಮಾನಿಸಲಾ ಯಿತು.

ನೀಟ್ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಕುಮಾರಿ ಅಕ್ಷತಾ ಶರಣಬಸಪ್ಪ ಗುಡಿಮನಿ ಅವರನ್ನು ಅಭಿನಂದಿಸಿ ಗೌರವಿಸಲಾಯಿತು.

ವಿವಿಧ ಸಂಘ- ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಮಹಿಳಾ ಪದಾಧಿಕಾರಿಗಳನ್ನೂ ಮಹಿಳಾ ಘಟಕದ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಮಾಜಿ ಅಧ್ಯಕ್ಷೆ ನಂದಾ ಬಾಳಿಹಳ್ಳಿಮಠ ಪ್ರಾರ್ಥನೆ ಸಲ್ಲಿಸಿದರು. ಲಿಂಗೈಕೆರಾದ ದಿವಂಗತ ಬಸವಣ್ಣೆಪ್ಪ ಹುಬ್ಬಳ್ಳಿ ಅವರ ಕಿರು ಪರಿಚಯವನ್ನು ಮಾಜಿ ಅಧ್ಯಕ್ಷೆ ಜಯಶ್ರೀ ಪಾಟೀಲ ಮಾಡಿಕೊಟ್ಟರು. ಗೌರವ ಕಾರ್ಯದರ್ಶಿ ಪೂರ್ಣಿಮಾ ಆಟದ ಕಾರ್ಯಕ್ರಮವನ್ನು ನಿರೂಪಿಸಿದರು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ವಾಣಿ ಜ್ಯೋದ್ಯಮ ಸಂಸ್ಥೆಯ ಪದಾಧಿ ಕಾರಿಗಳು, ಮಹಿಳಾ ಘಟಕದ ಸದಸ್ಯರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತ ರಿದ್ದರು.

## ಬೆಟಗೇರಿಯಲ್ಲಿ ವಿಶೇಷ ದಾಖಲಾತಿ ಆಂದೋಲನ; ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಮುಖ್ಯವಾಹಿನಿಗೆ ಕರೆತರಲು ಕವಿತಾ ದಂಡಿನ ಕರೆ

# ಸರ್ಕಾರಿ ಶಾಲೆಗೆ ಮಕ್ಕಳ ದಾಖಲಿಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ಪ್ರತಿಯೊಬ್ಬ ಪೋಷಕರ ಹೊಣೆಗಾರಿಕೆಯಾಗಿದೆ. ಸರ್ಕಾರಿ ಶಾಲೆಗಳಿಗೆ ಮಕ್ಕಳನ್ನು ದಾಖಲಿಸುವ ಮೂಲಕ ಅವರ ಉಜ್ವಲ ಭವಿಷ್ಯಕ್ಕೆ ಬುನಾದಿ ಹಾಕಬೇಕು ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಹೇಳಿದರು.

ಗದಗ ಶಹರ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಹಾಗೂ ಬೆಟಗೇರಿ ಕಿಲ್ಲಾ ಓಣಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಂಖ್ಯೆ2 ಮತ್ತು ಸಂಖ್ಯೆ5ರ ಸಂಯುಕ್ತ ಆಶ್ರಯದಲ್ಲಿ ಬೇಲೇರಿಯವರ ಓಣಿ, ಕನ್ಯಾಳಗಸಿ ಹಾಗೂ ನದಾಫ್ ಗಲ್ಲಿಯಲ್ಲಿ ಹಮ್ಮಿಕೊಂಡಿದ್ದ ವಿಶೇಷ ದಾಖಲಾತಿ ಆಂದೋಲನದಲ್ಲಿ ಅವರು ಮಾತನಾಡಿದರು.

ನಮ್ಮ ಶಾಲೆ, ನಮ್ಮ ಹೆಮ್ಮೆ, ನಮ್ಮ ಜವಾಬ್ದಾರಿ ಎಂಬ ಮನೋಭಾವದೊಂದಿಗೆ ಸಮುದಾಯ ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಕೈಜೋಡಿಸಬೇಕು. ಶಾಲಾ ಮೇಲುಸ್ತುವಾರಿ ಸಮಿತಿ ಸದಸ್ಯರು, ಹಳೆಯ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಸೇರಿ ಮನೆ ಮನೆಗೆ ತೆರಳಿ ಶಿಕ್ಷಣದ ಮಹತ್ವ ತಿಳಿಸಿ ದಾಖಲಾತಿ ಹೆಚ್ಚಳಕ್ಕೆ ಶ್ರಮಿಸಬೇಕು ಎಂದು ಅವರು ಕರೆ ನೀಡಿದರು.

ನಗರಸಭೆ ಸದಸ್ಯ ಚಂದ್ರು ಕರಿಸೋಮನಗೌಡ್ರ ಮಾತನಾಡಿ, ಶಾಲೆಯಿಂದ ಹೊರಗುಳಿದ ಪ್ರತಿಯೊಬ್ಬ ಮಗುವನ್ನೂ ಶಿಕ್ಷಣದ ಮುಖ್ಯವಾಹಿನಿಗೆ ಕರೆತರುವುದು ಸಮಾಜದ ಜವಾಬ್ದಾರಿಯಾಗಿದೆ. ಪೋಷಕರು ಶಾಲಾ ಸಭೆಗಳಲ್ಲಿ ಭಾಗವಹಿಸಿ ಮಕ್ಕಳ ಶೈಕ್ಷಣಿಕ ಪ್ರಗತಿ ಹಾಗೂ ಶಾಲೆಯ ಅಭಿವೃದ್ಧಿಗೆ ಸಲಹೆ–ಸೂಚನೆ ನೀಡುವ ಮೂಲಕ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಕೈಜೋಡಿಸಬೇಕು ಎಂದರು.

> **ಇಂದೇ ನಿಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗೆ ದಾಖಲಿಸಿ. ಮಕ್ಕಳ ಶಿಕ್ಷಣವೇ ಅವರ ಉಜ್ವಲ ಭವಿಷ್ಯದ ಭದ್ರ ಬುನಾದಿಯಾಗಿದ್ದು, ಸರ್ಕಾರಿ ಶಾಲೆಗಳ ಸಬಲೀಕರಣಕ್ಕೆ ಸಮುದಾಯವೂ ಕೈಜೋಡಿಸಬೇಕು.**
>
> – **ಕವಿತಾ ದಂಡಿನ,** ಸಂಪನ್ಮೂಲ ವ್ಯಕ್ತಿ

ಈ ವೇಳೆ ಗದಗ–ಬೆಟಗೇರಿಯ ಸೆಂಟ್ರಿಂಗ್ ಮತ್ತು ಬಾರ್ ಬೆಂಡಿಂಗ್ ಮೇಸ್ತ್ರಿಗಳ ಸಂಘದ ಅಧ್ಯಕ್ಷ ಹಾಗೂ ಶಾಲೆಯ ಹಳೆಯ ವಿದ್ಯಾರ್ಥಿ ನಿಂಗಪ್ಪ ಕಟ್ಟಿಮನಿ ಅವರು ಶಾಲಾ ಮಕ್ಕಳಿಗೆ ಸಿಹಿ ಭೋಜನದ ವ್ಯವಸ್ಥೆ ಮಾಡಿದರು. ದಾಖಲಾತಿ ಹೆಚ್ಚಳಕ್ಕಾಗಿ ತಮ್ಮ ಸ್ನೇಹಿತರನ್ನು ಒಗ್ಗೂಡಿಸಿ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯೋಪಾಧ್ಯಾಯಿನಿ ಎ.ವಿ. ರಂಗಣ್ಣವರ, ಪ್ರಶಾಂತ ಕನಾಜ, ಸುರೇಖಾ ತೊಂಡಿಹಾಳ, ಸುನಂದಾ ಖಾಬನವರ, ಸಂಗೀತಾ ನಾಗಲೋಟ, ಮಲ್ಲಮ್ಮ ತಡಹಾಳ, ತುಳಸಮ್ಮ ಪಾಟೀಲ, ನಿರ್ಮಲಾ ಹರಿಹರ, ಮುತ್ತಪ್ಪ ಡೋಣಿ, ಬಸನಗೌಡ ಕರಿಸೋಮನಗೌಡ್ರ, ಅನ್ನಪ್ಪ ಗಾರವಾಡ, ರಾಜು ಅಣ್ಣಿಗೇರಿ, ಮಲ್ಲಿಕಾರ್ಜುನ ಬಾರಕೇರ, ಮಾಬುಸಾಬ ಮೆಣಸಗಿ, ಪರಸಪ್ಪ ಕಾಳೆ, ಜಹೀರಾ ಬೇಗಂ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

## ಸಾಯಿಬಾಬಾ ಆತ್ಮಸಾಕ್ಷಾತ್ಕಾರ ಹೊಂದಿದ ಸದ್ಗುರು



**ವಿಜಯಸಾಕ್ಷಿ ಸುದ್ದಿ, ಗದಗ**

ಸಾಯಿಬಾಬಾ ಸಾಮಾನ್ಯ ಸಂತರಲ್ಲ. ಅವರು ಆತ್ಮಸಾಕ್ಷಾತ್ಕಾರ ಹೊಂದಿದ ಸದ್ಗುರುವಾಗಿದ್ದು, ಅವರಲ್ಲಿದ್ದ ಅಷ್ಟಸಿದ್ಧಿಗಳು ಭಕ್ತರ ಸಂಕಷ್ಟ ನಿವಾರಿಸಿ, ಬದುಕಿನಲ್ಲಿ ಸಕಾರಾತ್ಮಕ ಪರಿವರ್ತನೆ ತಂದಿವೆ ಎಂದು ಚಿಂತಕ ಹಾಗೂ ವೈದ್ಯ ಡಾ. ಎಸ್.ಬಿ. ಶೆಟ್ಟರ ಹೇಳಿದರು.

ನಗರದ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಗುರುಪೂರ್ಣಿಮೆಯ ಅಂಗವಾಗಿ ಆಯೋಜಿಸಿದ್ದ ಶ್ರೀ ಸಾಯಿ ಸಚ್ಚರಿತ್ರೆಪ್ರವಚನ ಮಾಲಿಕೆ–3ರಲ್ಲಿ ಅವರು ಮಾತನಾಡಿದರು. ಸಾಯಿಬಾಬಾರ ಅಂತರ್ಜ್ಞಾನ ಹಾಗೂ ಅಂತರ್ಯಾಮಿತ್ವವನ್ನು ಹಲವು ಪ್ರಸಂಗಗಳ ಮೂಲಕ ವಿವರಿಸಿದ ಅವರು, ಪಕ್ಷಿಗಳ ಭಾಷೆಯನ್ನು ಅರ್ಥೈಸಿ ಭಕ್ತರನ್ನು ಅಪಾಯದಿಂದ ಪಾರು ಮಾಡಿದ್ದು, ಪ್ರಸಾದದಲ್ಲಿ ವಿಷಕಾರಿ ಹಾವು ಇರುವುದನ್ನು ಮುಂಚಿತವಾಗಿ ಗುರುತಿಸಿ ದುರಂತ ತಪ್ಪಿಸಿದ್ದು ಅವರ ದೈವಿಕ ಶಕ್ತಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಅಪ್ಪಾಸಾಹೇಬ್ ಪಾಟೀಲರ ಮೇಲಿನ ಸುಳ್ಳು ಆರೋಪದ ಸಂದರ್ಭದಲ್ಲಿ ಅವರಿಗೆ ನ್ಯಾಯ ದೊರಕುವಂತೆ ಧೈರ್ಯ ತುಂಬಿದ್ದು, ನಾಸಿಕ್‌ನ ವಕೀಲ ದುಮಾಳ್ ಅವರಿಗೆ ಅನುಗ್ರಹ ತೋರಿದ್ದು ಭಕ್ತಿ ಮತ್ತು ಶ್ರದ್ಧೆಯ ಮಹತ್ವವನ್ನು ಸಾರುತ್ತದೆ ಎಂದರು. ಸಗುಣ ಆರಾಧನೆಯೇ ಆತ್ಮಜ್ಞಾನದ ಮೊದಲ ಮೆಟ್ಟಿಲು. ಸಾಯಿನಾಥರನ್ನು ನಿರಂತರ ಸ್ಮರಿಸುವ ಮೂಲಕ ಆತ್ಮಜ್ಞಾನ ಮತ್ತು ಬ್ರಹ್ಮಜ್ಞಾನವನ್ನು ಹೊಂದಬಹುದು ಎಂದು ಅವರು ತಿಳಿಸಿದರು.

ಸಾಯಿಬಾಬಾ ಕೇಳುತ್ತಿದ್ದ ನಾಲ್ಕು ಕಂತುಗಳಲ್ಲಿ 40 ಸಾವಿರ ರೂಪಾಯಿಎಂಬ ಮಾತಿನ ಆಧ್ಯಾತ್ಮಿಕ ಅರ್ಥವನ್ನು ವಿವರಿಸಿದ ಅವರು, ಅದು ಹಣಕ್ಕೆ ಸಂಬಂಧಪಟ್ಟದ್ದಲ್ಲ. ಧರ್ಮ, ಅರ್ಥ, ಕಾಮ, ಮೋಕ್ಷ ಎಂಬ ಪುರುಷಾರ್ಥಗಳು, ಮನಸ್ಸು, ಬುದ್ಧಿ, ಚಿತ್ತ, ಅಹಂಕಾರವನ್ನು ಭಗವಂತನಿಗೆ ಸಮರ್ಪಿಸುವ ಸಂದೇಶವಾಗಿದೆ ಎಂದು ಹೇಳಿದರು.

ರಾಮ ಮತ್ತು ರಹೀಂ ಒಂದೇ ಎಂಬ ಸಮಾನತೆಯ ಸಂದೇಶ ಸಾರಿದ ಸಾಯಿಬಾಬಾ ಜಾತಿ, ಮತ, ಧರ್ಮದ ಭೇದ ಮರೆತು ಸಹೋದರತ್ವದಿಂದ ಬದುಕುವಂತೆ ಬೋಧಿಸಿದ್ದರು. ಗುರುಪೂರ್ಣಿಮೆ ಕೇವಲ ಪೂಜೆಗೆ ಸೀಮಿತವಾಗದೆ, ಸದ್ಗುರುವಿನ ಉಪದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ದಿನವಾಗಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಪ್ರಸಾದ ಸೇವಾರ್ಥಿಗಳಾದ ಡಾ. ನೀರಜ ಶೆಟ್ಟರ (ಶಿವಾಂಗಿನಿ), ದೀಪಕ ಸುಲಾಖೆ, ಸುರೇಂದ್ರಕುಮಾರ ಸುಲಾಖೆ ಹಾಗೂ ಮಂಜುಳಾ ಅಂಗಡಿ ಅವರನ್ನು ಸನ್ಮಾನಿಸಲಾಯಿತು.

ಮಹೇಶಗೌಡ ತಲೇಗೌಡ್ರ, ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಮೃತವಾಲಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಸತ್ಸಂಗ ಸಮಿತಿಯ ಪದಾಧಿಕಾರಿಗಳು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ಅಪ್ಪಣ್ಣ ಇನಾಮತಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ಕುರ್ತಕೋಟಿ ಗ್ರಾಮದ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರು, ಗ್ರಾಮದ ಹಿರಿಯರು ಹಾಗೂ ರಾಜಕೀಯ ಮುಖಂಡರಾದ ಅಪ್ಪಣ್ಣ ಇನಾಮತಿ ಅವರ ಹುಟ್ಟುಹಬ್ಬವನ್ನು ಸರಳವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ಪ್ರೊ. ಉಮೇಶ್ ಹಿರೇಮಠ ಅವರು ಅಪ್ಪಣ್ಣ ಇನಾಮತಿ ಅವರಿಗೆ ಹುಟ್ಟುಹಬ್ಬದ ಶುಭಾಶಯಗಳನ್ನು ತಿಳಿಸಿ, ದೇವರು ಉತ್ತಮ ಆರೋಗ್ಯ, ದೀರ್ಘಾಯುಷ್ಯ ಹಾಗೂ ಇನ್ನಷ್ಟು ಜನಸೇವೆ ಮಾಡುವ ಶಕ್ತಿ ನೀಡಲಿ ಎಂದು ಹಾರೈಸಿದರು.

ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಬಳಿಗೇರ, ಗದಗ ಜಿಲ್ಲಾ ಮಾಧ್ಯಮಿಕ ಶಾಲಾ ನೌಕರರ ಸಂಘದ ಅಧ್ಯಕ್ಷ ಎಂ.ಕೆ. ಲಮಾಣಿ, ಬೂದಪ್ಪ ಅಂಗಡಿ, ಬಿ.ಕೆ. ನಿಂಬನಗೌಡ ಸೇರಿದಂತೆ ಹಲವರು ಉಪಸ್ಥಿತರಿದ್ದು ಶುಭಾಶಯ ಕೋರಿದರು.

### ಗದಗ ಉತ್ಸವ 2026ಕ್ಕೆ ಆಹ್ವಾನ




**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ವತಿಯಿಂದ ಆಯೋಜಿಸಲಾಗುತ್ತಿರುವ ಗದಗ ಉತ್ಸವ2026ಟಿ ಕೈಗಾರಿಕಾ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳದಲ್ಲಿ ಭಾಗವಹಿಸುವಂತೆ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆ, ಹುಬ್ಬಳ್ಳಿಯ ಅಧ್ಯಕ್ಷ ಜಿ.ಕೆ. ಆದಪ್ಪಗೌಡ್ರ ಅವರಿಗೆ ಆಹ್ವಾನ ನೀಡಲಾಯಿತು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ, ಮಾಜಿ ಅಧ್ಯಕ್ಷ ಮಧುಸೂದನ ಪುಣೇಕರ, ಎಂ.ಬಿ. ಸೊರಕೊಡ, ಉಪಾಧ್ಯಕ್ಷ ಜಯದೇವ ಎಂ. ಮೆಣಸಗಿ ಹಾಗೂ ಕಾರ್ಯದರ್ಶಿ ಚನ್ನವೀರಪ್ಪ ಪಿ. ಹುಣಸಿಕಟ್ಟಿ ಅವರು ಹುಬ್ಬಳ್ಳಿಯ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಗೆ ಭೇಟಿ ನೀಡಿ ಆಹ್ವಾನ ಪತ್ರಿಕೆಯನ್ನು ನೀಡಿ, ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಕೋರಿದರು.

### ಆರೋಗ್ಯಕರ ಮೆದುಳಿಗೆ ಉತ್ತಮ ಜೀವನಶೈಲಿ ಅಗತ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಆರೋಗ್ಯಕರ ಮೆದುಳು ಉತ್ತಮ ಬದುಕಿನ ಮೂಲಾಧಾರವಾಗಿದ್ದು, ನಿಯಮಿತ ನಿದ್ರೆ, ವ್ಯಾಯಾಮ, ಯೋಗ ಹಾಗೂ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಂಡರೆ ನರರೋಗಗಳ ಅಪಾಯವನ್ನು ಕಡಿಮೆ ಮಾಡಬಹುದು ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಹಾಗೂ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ (ಕಭಿ) ಕಾರ್ಯಕ್ರಮದ ಅನುಷ್ಠಾನಾಧಿಕಾರಿ ಡಾ. ಜಿ.ಎಸ್. ಪಲ್ಲೇದ ಹೇಳಿದರು.

ಕೆ.ಎಚ್. ಪಾಟೀಲ ವೈದ್ಯಕೀಯ ವಿಜ್ಞಾನಗಳ ಮಹಾವಿದ್ಯಾಲಯದ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ (ಕಭಿ) ಕ್ಲಿನಿಕ್ ವತಿಯಿಂದ ವಿಶ್ವ ಮೆದುಳು ದಿನ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪ್ರತಿ ವರ್ಷ ಜುಲೈ 22ರಂದು ವಿಶ್ವ ಮೆದುಳು ದಿನವನ್ನು ಆಚರಿಸುವ ಮೂಲಕ ಮೆದುಳಿನ ಆರೋಗ್ಯ ಹಾಗೂ ನರರೋಗಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲಾಗುತ್ತಿದೆ. ಪ್ರತಿಯೊಬ್ಬರೂ ದಿನಕ್ಕೆ ಕನಿಷ್ಠ ಏಳರಿಂದ ಎಂಟು ಗಂಟೆಗಳ ನಿದ್ರೆ ಮಾಡಬೇಕು. ನಿಯಮಿತ ವ್ಯಾಯಾಮ, ವಾಹನ ಚಾಲನೆಯ ವೇಳೆ ಹೆಲ್ಮೆಟ್ ಹಾಗೂ ಸೀಟ್‌ಬೆಲ್ಟ್ ಕಡ್ಡಾಯವಾಗಿ ಬಳಸಬೇಕು. ಖಿನ್ನತೆ, ಆತಂಕ ಸೇರಿದಂತೆ ಮಾನಸಿಕ ಸಮಸ್ಯೆಗಳು ಕಂಡುಬಂದರೆ ವೈದ್ಯಕೀಯ ಸಲಹೆ ಪಡೆಯಬೇಕು. ಮೊಬೈಲ್ ಹಾಗೂ ಇತರ ಡಿಜಿಟಲ್ ಸಾಧನಗಳ ಅತಿಯಾದ ಬಳಕೆ ತಪ್ಪಿಸಿ, ಒತ್ತಡ ನಿವಾರಣೆಗೆ ಯೋಗ ಮತ್ತು ಧ್ಯಾನವನ್ನು ರೂಢಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಎನ್‌ಸಿಡಿ ವೈದ್ಯಾಧಿಕಾರಿ ಡಾ. ಅರ್ಪಿತಾ ಮಾತನಾಡಿ, ಆರೋಗ್ಯಕರ ಜೀವನಶೈಲಿ ಹಾಗೂ ನಿಯಮಿತ ಆರೋಗ್ಯ ತಪಾಸಣೆಯಿಂದ ಅಸಾಂಕ್ರಾಮಿಕ ರೋಗಗಳನ್ನು ನಿಯಂತ್ರಣದಲ್ಲಿ ಇಡಬಹುದು. ಮೆದುಳಿನ ಆರೋಗ್ಯ ಕಾಪಾಡಿಕೊಳ್ಳಲು ಪ್ರತಿಯೊಬ್ಬರೂ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ತಿಳಿಸಿದರು. ಕಾರ್ಯಕ್ರಮವನ್ನು ವೈದ್ಯಕೀಯ ಅಧೀಕ್ಷಕ ಡಾ. ವಿನಾಯಕ ಪಂಚಗಾರ, ಎಲುಬು-ಕೀಲು ವಿಭಾಗದ ಮುಖ್ಯಸ್ಥ ಡಾ. ಮಹಾಂತೇಶ ಪಾಟೀಲ, ವೈದ್ಯಕೀಯ ವಿಭಾಗದ ಮುಖ್ಯಸ್ಥ ಡಾ. ಸಂಗಮೇಶ ಅಸೂಟಿ ಹಾಗೂ ಕ್ಷಯರೋಗ ವಿಭಾಗದ ಮುಖ್ಯಸ್ಥ ಡಾ. ಅರುಣಕುಮಾರ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಮೆದುಳು ಆರೋಗ್ಯ ಉಪಕ್ರಮ (ಕಭಿ) ಕಾರ್ಯಕ್ರಮದ ಸಿಬ್ಬಂದಿ ಹಾಗೂ ಜಿಲ್ಲಾ ಕುಷ್ಠರೋಗ ವಿಭಾಗದ ಸಿಬ್ಬಂದಿ ಉಪಸ್ಥಿತರಿದ್ದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಸಿ. ಚವ್ಹಾಣ ಕಾರ್ಯಕ್ರಮ ನಿರೂಪಿಸಿದರು. ಕಭಿ ಜಿಲ್ಲಾ ಸಂಯೋಜಕ ಪ್ರವೀಣ ಎಸ್. ರೋಣ ವಂದಿಸಿದರು.

### ದೇವರಭೂಪುರ ಬೃಹನ್ಮಠದಲ್ಲಿ ಗುರುಪಟ್ಟಾಧಿಕಾರ ಮಹೋತ್ಸವದಲ್ಲಿ ರಂಭಾಪುರಿ ಜಗದ್ಗುರು

# ಸನ್ಮಾರ್ಗದ ಬದುಕಿನಿಂದ ಜೀವನ ಉಜ್ವಲ

**ವಿಜಯಸಾಕ್ಷಿ ಸುದ್ದಿ, ಲಿಂಗಸುಗೂರು**



ಮನುಷ್ಯನ ಬದುಕಿಗೆ ಸತ್ಯ, ಧರ್ಮ ಮತ್ತು ಸನ್ಮಾರ್ಗವೇ ನಿಜವಾದ ಆಧಾರವಾಗಿದ್ದು, ಮಹಾತ್ಮರು ತೋರಿದ ದಾರಿಯಲ್ಲಿ ಬದುಕಿದರೆ ಜೀವನ ಉಜ್ವಲವಾಗುತ್ತದೆ ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದರು ಹೇಳಿದರು.

ದೇವರಭೂಪುರ ಬೃಹನ್ಮಠದ ಅಭಿನವ ಗಜದಂಡ ಶಿವಾಚಾರ್ಯರ 21ನೇ ವರ್ಷದ ಗುರುಪಟ್ಟಾಧಿಕಾರ ಮಹೋತ್ಸವ ಅಂಗವಾಗಿ ನಡೆದ ಶ್ರೀ ಜಗದ್ಗುರು ಪಂಚಪೀಠಾಧೀಶ್ವರರ ಅಡ್ಡಪಲ್ಲಕ್ಕಿ ಮಹೋತ್ಸವ ಹಾಗೂ ಜನಜಾಗೃತಿ ಸದ್ಧರ್ಮ ಸಮಾರಂಭದಲ್ಲಿ ಆಶೀರ್ವಚನ ನೀಡಿದ ಅವರು, ಮನಸ್ಸಿಗೆ ಶಾಂತಿ ಹಾಗೂ ಆತ್ಮಕ್ಕೆ ಆನಂದ ನೀಡುವುದೇ ನಿಜವಾದ ಧರ್ಮ. ಮನುಷ್ಯನ ನಡೆ-ನುಡಿಗಳು ಸತ್ಯದ ಪರವಾಗಿದ್ದಾಗ ಮಾತ್ರ ಬದುಕು ಸಾರ್ಥಕವಾಗುತ್ತದೆ ಎಂದರು.

ಹೊನ್ನು, ಹೆಣ್ಣು, ಮಣ್ಣಿಗಾಗಿ ಹೋರಾಡಿದವರು ಅಸಂಖ್ಯಾತರು. ಆದರೆ ಭಗವಂತನಿಗಾಗಿ ಬದುಕನ್ನು ಅರ್ಪಿಸಿದವರೇ ಸಮಾಜಕ್ಕೆ ದಾರಿದೀಪರಾಗಿದ್ದಾರೆ. ಜಾತಿ-ಮತದ ಭ್ರಮೆಯಲ್ಲಿ ಬದುಕುವವರಿಗೆ ಶಾಂತಿ ದೊರೆಯುವುದಿಲ್ಲ. ಮೌಲ್ಯಗಳ ಉಳಿವು ಮಾನವನ ಆಚರಣೆಯಲ್ಲಿಯೇ ಅಡಗಿದೆ ಎಂದು ತಿಳಿಸಿದರು.

ಶ್ರೀ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಆಶೀರ್ವಚನ ನೀಡಿ, ಧರ್ಮ ಪರಿಪಾಲನೆಯ ಮೂಲಕವೇ ಸಮಾಜಕ್ಕೆ ಬೆಳಕು ನೀಡಲು ಸಾಧ್ಯ. ಭೌತಿಕ ಸಂಪತ್ತು ಶಾಶ್ವತವಲ್ಲ. ಆದರೆ ಮಹಾತ್ಮರ ಆದರ್ಶ ಜೀವನ ಶಾಶ್ವತವಾಗಿ ಜನರ ಮನಸ್ಸಿನಲ್ಲಿ ಉಳಿಯುತ್ತದೆ ಎಂದರು.

ಶ್ರೀಶೈಲ ಜಗದ್ಗುರು ಡಾ. ಚನ್ನಸಿದ್ಧರಾಮ ಪಂಡಿತಾರಾಧ್ಯ ಶಿವಾಚಾರ್ಯ ಭಗವತ್ಪಾದರು ಮಾತನಾಡಿ, ಸಮಾಜದಲ್ಲಿ ಬೇರ್ಪಡಿಸುವ ಮನೋಭಾವ ಹೆಚ್ಚುತ್ತಿರುವ ಸಂದರ್ಭದಲ್ಲಿ ದಯೆ, ಮಾನವೀಯತೆ ಮತ್ತು ಧರ್ಮದ ಮೌಲ್ಯಗಳನ್ನು ಬೆಳೆಸುವ ಅಗತ್ಯವಿದೆ ಎಂದು ಹೇಳಿದರು. ಶ್ರೀಮತ್ಕಾಶೀ ಡಾ. ಚಂದ್ರಶೇಖರ ಜಗದ್ಗುರುಗಳು ಮಾತನಾಡಿ, ನಾವು ಏನು ಸಂಪಾದಿಸಿದ್ದೇವೆ ಎನ್ನುವುದಕ್ಕಿಂತ ಹೇಗೆ ಬದುಕಿದ್ದೇವೆ ಎಂಬುದು ಮುಖ್ಯ. ಹಸಿದವರಿಗೆ ಅನ್ನ, ಬಾಯಾರಿದವರಿಗೆ ನೀರು, ಬಳಲಿದವರಿಗೆ ನೆರಳು ನೀಡುವುದಕ್ಕಿಂತ ದೊಡ್ಡ ಪುಣ್ಯ ಮತ್ತೊಂದಿಲ್ಲ ಎಂದರು.

ಶ್ರೀಮತ್ಕಾಶೀ ನೂತನ ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಜಗದ್ಗುರುಗಳು ಆಶೀರ್ವಚನ ನೀಡಿ, ಸತ್ಯ ಮತ್ತು ಧರ್ಮದ ಮಾರ್ಗದಲ್ಲಿ ನಡೆಯುವ ಸಂಕಲ್ಪ ಪ್ರತಿಯೊಬ್ಬರಲ್ಲೂ ಮೂಡಬೇಕು ಎಂದು ಕರೆ ನೀಡಿದರು. ಇದೇ ಸಂದರ್ಭದಲ್ಲಿ ಟಿಗುಡಗುಂಟಿ ಶ್ರೀ ಅಮರೇಶ್ವರ ಪುರಾಣಟಿ ಕೃತಿ ಲೋಕಾರ್ಪಣೆ ಮಾಡಲಾಯಿತು.

ಜಾಲಹಳ್ಳಿ ಬೃಹನ್ಮಠದ ಜಯಶಾಂತಲಿಂಗ ಶಿವಾಚಾರ್ಯರು ಉಪದೇಶಾಮೃತ ನೀಡಿದರು. ಬಿಚ್ಚಾಲಿಮಠದ ವೀರಭದ್ರ ಶಿವಾಚಾರ್ಯರು ಸಮಾರಂಭದ ನೇತೃತ್ವ ವಹಿಸಿದ್ದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ದೇವರಭೂಪುರ ಬೃಹನ್ಮಠದ ಅಭಿನವ ಗಜದಂಡ ಶಿವಾಚಾರ್ಯರು, ಪಂಚಪೀಠಾಧೀಶ್ವರರ ಆಗಮನದಿಂದ ದೇವರಭೂಪುರ ಭೂ ಕೈಲಾಸವಾಗಿ ಮಾರ್ಪಟ್ಟಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಸಮಾರಂಭಕ್ಕೂ ಮುನ್ನ ಶ್ರೀ ರಂಭಾಪುರಿ, ಶ್ರೀ ಉಜ್ಜಯಿನಿ, ಶ್ರೀ ಶ್ರೀಶೈಲ ಹಾಗೂ ಶ್ರೀ ಕಾಶೀ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ವೈಭವದಿಂದ ನಡೆಯಿತು. ಸಹಸ್ರಾರು ಭಕ್ತರು ಭಾಗವಹಿಸಿ ಜಗದ್ಗುರುಗಳ ಆಶೀರ್ವಾದ ಪಡೆದರು. ಬಳಿಕ ಅನ್ನದಾಸೋಹ ಜರುಗಿತು.

> **ಸತ್ಯ ಮನುಷ್ಯನನ್ನು ಬದಲಿಸುತ್ತದೆ. ಮಹಾತ್ಮರು ತೋರಿದ ಸನ್ಮಾರ್ಗದಲ್ಲಿ ಬದುಕಿದರೆ ಜೀವನ ಉಜ್ವಲವಾಗುತ್ತದೆ. ಮನಸ್ಸಿಗೆ ಶಾಂತಿ, ಆತ್ಮಕ್ಕೆ ಆನಂದ ನೀಡುವುದೇ ನಿಜವಾದ ಧರ್ಮ.**
>
> **- ಡಾ. ವೀರಸೋಮೇಶ್ವರ ಶಿವಾಚಾರ್ಯ ಭಗವತ್ಪಾದರು**

### ರಂಗಭೂಮಿಗೆ ಹೊಸ ಆಯಾಮ ನೀಡಿದ ಅಪರೂಪದ ನಿರ್ದೇಶಕ; ಜಯತೀರ್ಥ ಜೋಶಿ ಸ್ಮರಣೆ

# ರಂಗಭೂಮಿಗೆ ಜಯತೀರ್ಥ ಜೋಶಿ ಕೊಡುಗೆ ಅಪಾರ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಅಭಿರುಚಿ ಹೊಂದಿದ ಕ್ರಿಯಾಶೀಲ ಸಂಪನ್ಮೂಲಗಳನ್ನು ಸಮರ್ಪಕವಾಗಿ ಬಳಸಿಕೊಂಡು, ಸಾಮಾನ್ಯ ಜನರಿಗೂ ಅರ್ಥವಾಗುವ ಭಾಷೆಯಲ್ಲಿ ನಾಟಕಗಳನ್ನು ರೂಪಿಸುವ ಮೂಲಕ ಕನ್ನಡ ರಂಗಭೂಮಿಗೆ ಹೊಸ ಆಯಾಮ ನೀಡಿದ ಅಪರೂಪದ ನಿರ್ದೇಶಕರಲ್ಲಿ ಜಯತೀರ್ಥ ಜೋಶಿ ಪ್ರಮುಖರು ಎಂದು ನಟ, ನಾಟಕಕಾರ ಹಾಗೂ ನಿರ್ದೇಶಕ ಡಾ. ಪ್ರಕಾಶ ಗರುಡ ಅಭಿಪ್ರಾಯಪಟ್ಟರು.

ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧೀನದ ಧಾರವಾಡ ರಂಗಾಯಣ ಹಾಗೂ ಜಿ.ಬಿ. ಜೋಶಿ ಮೆಮೋರಿಯಲ್ ಟ್ರಸ್ಟ್ ಸಹಯೋಗದಲ್ಲಿ ರಂಗಾಯಣದ ಸುವರ್ಣ ಸಾಂಸ್ಕೃತಿಕ ಸಮುಚ್ಚಯ ಸಭಾಭವನದಲ್ಲಿ ಶುಕ್ರವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜಯತೀರ್ಥ ಜೋಶಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಜಯತೀರ್ಥ ಜೋಶಿ ಅವರು ರಂಗಭೂಮಿಯ ಸಂಸ್ಕಾರವನ್ನು ಮೈಗೂಡಿಸಿಕೊಂಡ ವ್ಯಕ್ತಿಯಾಗಿದ್ದರು. ರಂಗಾಯಣದಲ್ಲಿ ಉಪನಿರ್ದೇಶಕರಾಗಿ ಸೇವೆ ಸಲ್ಲಿಸಿದ ಅವರು ಅನೇಕ ಯಶಸ್ವಿ ರಂಗಪ್ರಯೋಗಗಳ ಮೂಲಕ ತಮ್ಮದೇ ಆದ ಛಾಪು ಮೂಡಿಸಿದರು. ತಾವು ನಿರ್ದೇಶಿಸಿದ ಪ್ರತಿಯೊಂದು ನಾಟಕದಲ್ಲೂ ಸಂಪೂರ್ಣವಾಗಿ ತೊಡಗಿಸಿಕೊಂಡು, ಪ್ರೇಕ್ಷಕರನ್ನೇ ನಾಟಕದ ಭಾಗವಾಗಿಸುವ ವಾತಾವರಣ ನಿರ್ಮಿಸುವಲ್ಲಿ ಅವರು ವಿಶಿಷ್ಟ ಪ್ರತಿಭೆ ಹೊಂದಿದ್ದರು ಎಂದು ಹೇಳಿದರು. ಬಿ.ವಿ. ಕಾರಂತರ ಮಾರ್ಗದರ್ಶನದಲ್ಲಿ ಬೆಳೆದ ಜಯತೀರ್ಥ ಜೋಶಿ ಅವರು ಟಿಮೃಚ್ಛಕಟಿಕಟಿ, ಟಿಕದಡಿದ ನೀರುಟಿ, ಟಿದಿ ಲೆಸನ್‌ಟಿ, ಟಿಹಯವದನಟಿ, ಟಿತಲೆದಂಡಟಿ, ಟಿಸತ್ತವರ ನೆರಳುಟಿ, ಟಿಡಾಂಬರು ಬಂದದುಟಿ, ಟಿಜೋಕುಮಾರಸ್ವಾಮಿಟಿ, ಟಿಗುಲಾಮನ ಸ್ವಾತಂತ್ರ್ಯಟಿ, ಟಿಪೇಯಿಂಗ್ ಗೆಸ್ಟ್‌ಟಿ ಸೇರಿದಂತೆ ಅನೇಕ ಮಹತ್ವದ ನಾಟಕಗಳನ್ನು ನಿರ್ದೇಶಿಸಿ ಕನ್ನಡ ರಂಗಭೂಮಿಗೆ ವಿಶಿಷ್ಟ ಕೊಡುಗೆ ನೀಡಿದ್ದಾರೆ. ಟಿಸಪ್ತಮಂಡಲಟಿ ಯೋಜನೆಯಡಿ ಧಾರವಾಡ, ಹುಬ್ಬಳ್ಳಿ ಹಾಗೂ ಕಿತ್ತೂರಿನಲ್ಲಿ ನಾಟಕೋತ್ಸವಗಳನ್ನು ಆಯೋಜಿಸುವ ಮೂಲಕ ರಂಗಭೂಮಿಗೆ ಹೊಸ ಚೈತನ್ಯ ತುಂಬಿದ್ದರು ಎಂದು ಸ್ಮರಿಸಿದರು.

ರಂಗಾಯಣದ ನಿರ್ದೇಶಕ ಝುಕೀರ್ ನದಾಫ ಮಾತನಾಡಿ, ನಾಟಕವು ಕೇವಲ ಒಂದು ಅಥವಾ ಎರಡು ಪ್ರದರ್ಶನಗಳಿಗೆ ಸೀಮಿತವಾಗದೆ ಎಲ್ಲ ವರ್ಗದ ಪ್ರೇಕ್ಷಕರನ್ನು ತಲುಪಬೇಕು ಎಂಬುದು ಜಯತೀರ್ಥ ಜೋಶಿ ಅವರ ದೃಷ್ಟಿಕೋನವಾಗಿತ್ತು. ಸವದತ್ತಿಯ ಐತಿಹಾಸಿಕ ಕೋಟೆಯನ್ನು ರಂಗವೇದಿಕೆಯಾಗಿಸಿ ಟಿಗುಲಾಮನ ಸ್ವಾತಂತ್ರ್ಯಟಿ ನಾಟಕ ಪ್ರದರ್ಶಿಸುವ ಮೂಲಕ ಹೊಸ ಪ್ರಯೋಗಕ್ಕೆ ಅವರು ನಾಂದಿ ಹಾಡಿದ್ದರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿ.ಬಿ. ಜೋಶಿ ಮೆಮೋರಿಯಲ್ ಟ್ರಸ್ಟ್‌ನ ಸಂಚಾಲಕ ಸಮೀರ್ ಜೋಶಿ ಉಪಸ್ಥಿತರಿದ್ದರು. ರಂಗಾಯಣದ ಆಡಳಿತಾಧಿಕಾರಿ ಶಶಿಕಲಾ ಹುಡೇದ ಸ್ವಾಗತಿಸಿದರು. ಅಕ್ಕಮ್ಮಾ ದೇವರಮನಿ ಕಾರ್ಯಕ್ರಮ ನಿರೂಪಿಸಿದರು. ಬಳಿಕ ಧಾರವಾಡ ರಂಗಾಯಣ ರೆಪರ್ಟರಿ ಕಲಾವಿದರು ಟಿಮರಳಿ ಮಹಾತ್ಮನೆಡೆಗೆಟಿ ನಾಟಕ ಹಾಗೂ ರಂಗಸಂಗೀತ ಕಾರ್ಯಕ್ರಮವನ್ನು ಪ್ರಸ್ತುತಪಡಿಸಿದರು.

> **ನಾಟಕವು ಕೇವಲ ಮನರಂಜನೆಯ ಸಾಧನವಲ್ಲ; ಸಮಾಜದೊಂದಿಗೆ ಸಂವಾದ ನಡೆಸುವ ಪ್ರಬಲ ಮಾಧ್ಯಮ ಎಂಬುದನ್ನು ಜಯತೀರ್ಥ ಜೋಶಿ ತಮ್ಮ ರಂಗಪ್ರಯೋಗಗಳ ಮೂಲಕ ಸಾಬೀತುಪಡಿಸಿದ್ದರು.**
>
> **- ಡಾ. ಪ್ರಕಾಶ ಗರುಡ**

### ಎರಡು ಬಸ್ ಶೆಲ್ಟರ್ ನಿರ್ಮಾಣಕ್ಕೂ ಭೂಮಿಪೂಜೆ | ಕ್ಷೇತ್ರದ ಅಭಿವೃದ್ಧಿಗೆ ಶಾಸಕ ಜಿ.ಎಸ್. ಪಾಟೀಲ ಬದ್ಧ ಎಂದ ಮಿಥುನ ಪಾಟೀಲ

# ಅಬ್ಬಿಗೇರಿಯಲ್ಲಿ ₹20 ಲಕ್ಷ ಸಿಸಿ ರಸ್ತೆ ಕಾಮಗಾರಿಗೆ ಚಾಲನೆ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ರೋಣ ತಾಲೂಕಿನ ಅಬ್ಬಿಗೇರಿ ಗ್ರಾಮದಲ್ಲಿ ಮುಖ್ಯಮಂತ್ರಿ ಮೂಲಸೌಕರ್ಯ ಅಭಿವೃದ್ಧಿ ಯೋಜನೆ (CMIAP) ಅಡಿಯಲ್ಲಿ ₹20 ಲಕ್ಷ ವೆಚ್ಚದ ಸಿಸಿ ರಸ್ತೆ ನಿರ್ಮಾಣ ಕಾಮಗಾರಿಗೆ ಶುಕ್ರವಾರ ಭೂಮಿಪೂಜೆ ನೆರವೇರಿಸಲಾಯಿತು. ಇದೇ ವೇಳೆ ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅನುದಾನದಲ್ಲಿ ಮಂಜೂರಾಗಿರುವ ಎರಡು ಬಸ್ ಶೆಲ್ಟರ್‌ಗಳ ನಿರ್ಮಾಣ ಕಾಮಗಾರಿಗೂ ಚಾಲನೆ ನೀಡಲಾಯಿತು.

ರೋಣ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಮಿಥುನ ಪಾಟೀಲ ಭೂಮಿಪೂಜೆ ನೆರವೇರಿಸಿ ಮಾತನಾಡಿ, ಗ್ರಾಮಸ್ಥರ ಬಹುಕಾಲದ ಬೇಡಿಕೆಗೆ ಸ್ಪಂದಿಸಿ ಶಾಸಕ ಹಾಗೂ ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ ಅವರು ಎರಡು ಬಸ್ ಶೆಲ್ಟರ್‌ಗಳನ್ನು ಮಂಜೂರು ಮಾಡಿಸಿದ್ದು, ಇದೀಗ ಕಾಮಗಾರಿ ಆರಂಭಗೊಂಡಿದೆ ಎಂದು ತಿಳಿಸಿದರು.

2023ರಲ್ಲಿ ಶಾಸಕರಾದ ಬಳಿಕ ಜಿ.ಎಸ್. ಪಾಟೀಲ ಅವರು ರಸ್ತೆ, ಚರಂಡಿ, ಕುಡಿಯುವ ನೀರು, ಶಿಕ್ಷಣ ಸೇರಿದಂತೆ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಿದ್ದು, ಅಬ್ಬಿಗೇರಿ ಗ್ರಾಮದಲ್ಲಿಯೂ ಈಗಾಗಲೇ ಹಲವು ಸಿಸಿ ರಸ್ತೆ ಕಾಮಗಾರಿಗಳು ಪೂರ್ಣಗೊಂಡಿವೆ. ಮುಂದಿನ ದಿನಗಳಲ್ಲಿ ₹80 ಲಕ್ಷ ವೆಚ್ಚದ ಮತ್ತೊಂದು ಸಿಸಿ ರಸ್ತೆ ಕಾಮಗಾರಿಗೂ ಭೂಮಿಪೂಜೆ ನೆರವೇರಿಸಲಾಗುವುದು ಎಂದು ಹೇಳಿದರು.

ಗ್ರಾಮದಲ್ಲಿ ಮಹಿಳೆಯರಿಗಾಗಿ ಸಾರ್ವಜನಿಕ ಶೌಚಾಲಯ ನಿರ್ಮಿಸುವಂತೆ ಗ್ರಾಮಸ್ಥರು ಮನವಿ ಮಾಡಿದ್ದು, ಈ ಕುರಿತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ಶೀಘ್ರದಲ್ಲೇ ಕಾಮಗಾರಿ ಆರಂಭವಾಗಲಿದೆ ಎಂದು ಅವರು ಭರವಸೆ ನೀಡಿದರು.

ಗ್ರಾಮದ ಅಭಿವೃದ್ಧಿಗೆ ಸಾರ್ವಜನಿಕರ ಸಹಕಾರ ಅಗತ್ಯವಾಗಿದ್ದು, ನಿರ್ಮಾಣಗೊಳ್ಳುತ್ತಿರುವ ಎರಡು ಬಸ್ ಶೆಲ್ಟರ್‌ಗಳ ಕಾಮಗಾರಿ ಸುಮಾರು ಎರಡು ತಿಂಗಳೊಳಗೆ ಪೂರ್ಣಗೊಂಡು ಸಾರ್ವಜನಿಕರ ಸೇವೆಗೆ ಲಭ್ಯವಾಗಲಿವೆ ಎಂದರು.

ಕಾರ್ಯಕ್ರಮದಲ್ಲಿ ಯಲ್ಲಾಲಿಂಗೇಶ್ವರ ಮಠದ ಬಸವರಾಜ ಶರಣರು ಸಾನ್ನಿಧ್ಯ ವಹಿಸಿದ್ದರು. ಬಸವರಾಜ ಪಲ್ಲೇದ, ಗುರುನಾಥ ಅವರಡ್ಡಿ, ಬಸವರಾಜ ತಳವಾರ, ಎಚ್.ಟಿ. ದ್ವಾಸಲ, ಅಂದಪ್ಪ ವೀರಾಪೂರ, ಸುರೇಶ ಬಸವರಡ್ಡೇರ, ಸಿ.ಕೆ. ಕಾಳಗಿ, ಸಕ್ರಗೌಡ ಪಾಟೀಲ, ಎಂ.ಕೆ. ಅಂಗಡಿ, ಸುರೇಶ ಶಿರೋಳ, ರಾಮನಗೌಡ ಹಲಕುರ್ಕಿ, ಮಹಾಂತೇಶ ತಳವಾರ, ಶರಣಪ್ಪಗೌಡ ಮಾದಿನೂರ, ಮಲಕಾಜಪ್ಪ ಕಲ್ಲೆಶ್ಯಾಣಿ, ಸೋಮು ಶಿರೋಳ, ಮುತ್ತಣ್ಣ ಕುಕನೂರ, ಸಿದ್ದು ಹನುಮನಾಳ, ಬಸವರಾಜ ಕಮ್ಮಾರ, ಬಾಬು ಬನ್ನಿಕೊಪ್ಪ, ಶಿವಾನಂದ ಗುಗ್ಗರಿ, ಬಸವರಾಜ ಗುಗ್ಗರಿ, ಶಶಿ ಸಂಗನಾಳ, ತಿರುಮಲಿ ಬಂಡಿವಡ್ಡರ, ರಮೇಶ ಕುಡಗುಂಟಿ, ಶಂಕರ ಐಹೋಳಿ, ಸುಭಾಷ ಕೆಂಗಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ರಾಮದ ಮುಖಂಡರು, ಯುವಕರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

### ಭಕ್ತಿಯೇ ಭಗವಂತನನ್ನು ತಲುಪುವ ಮಾರ್ಗ ಎಂದ ಡಾ. ಶೆಟ್ಟರ

# ಸದ್ಗುರುವಿನ ಶರಣಾಗತಿಯೇ ಬದುಕಿನ ದಾರಿದೀಪ



**ವಿಜಯಸಾಕ್ಷಿ ಸುದ್ದಿ, ಗದಗ**

ಭಕ್ತನು ಎಲ್ಲಿದ್ದರೂ ಅವನ ಮನದಾಳವನ್ನು ಅರಿತು ತನ್ನ ಬಳಿಗೆ ಸೆಳೆದು ತರುವ ಶಕ್ತಿ ಸದ್ಗುರು ಸಾಯಿಬಾಬಾರಲ್ಲಿದೆ. ಅವರನ್ನು ಸ್ಮರಿಸಿದರೆ ಸಂಕಟಗಳು ದೂರವಾಗುತ್ತವೆ. ಸಾಯಿಬಾಬಾರ ಪವಾಡಗಳು ಕೇವಲ ನೂರು ವರ್ಷಗಳ ಹಿಂದಿನ ಕಥೆಗಳಲ್ಲ, ಇಂದಿನ ಬದುಕಿಗೂ ದಾರಿದೀಪವಾಗಿವೆ ಎಂದು ಚಿಂತಕ ಹಾಗೂ ವೈದ್ಯ ಡಾ. ಎಸ್.ಬಿ. ಶೆಟ್ಟರ ಹೇಳಿದರು.

ನಗರದ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಗದಗ-ಬೆಟಗೇರಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗದ ವತಿಯಿಂದ ಗುರು ಪೂರ್ಣಿಮೆ ಅಂಗವಾಗಿ ಆಯೋಜಿಸಿದ್ದ ಟಿಶ್ರೀ ಸಾಯಿ ಸಚ್ಚರಿತ್ರೆಟಿ ಪ್ರವಚನ ಮಾಲಿಕೆ-4ರಲ್ಲಿ ಸಾಯಿಬಾಬಾರ ಬೋಧನೆ ಮತ್ತು ಭಕ್ತ ಪರೀಕ್ಷೆ ವಿಷಯದ ಕುರಿತು ಅವರು ಪ್ರವಚನ ನೀಡಿದರು.

ಸದ್ಗುರುಗಳು ಜನ್ಮ ನೀಡಿದ ತಂದೆಗಿಂತಲೂ ಶ್ರೇಷ್ಠರು. ಏಕೆಂದರೆ ಅವರು ಮನುಷ್ಯನನ್ನು ಜನನ-ಮರಣದ ಚಕ್ರದಿಂದ ಪಾರು ಮಾಡುತ್ತಾರೆ. ಭಕ್ತಿ ಎಂದರೆ ಕೇವಲ ಪೂಜೆ ಅಲ್ಲ, ಸಂಪೂರ್ಣ ಶರಣಾಗತಿ. ಸಾಯಿ ಬಾಬಾರ ಜೀವನದಲ್ಲಿ ಜಾತಿ, ಮತ, ಭೇದ ಭಾವಕ್ಕೆ ಸ್ಥಾನವೇ ಇರಲಿಲ್ಲ ಎಂದು ಹೇಳಿದರು.

ಪ್ರವಚನದಲ್ಲಿ ಸಾಯಿ ಸಚ್ಚರಿತ್ರೆಯಲ್ಲಿನ ಹಲವು ಪ್ರಸಂಗಗಳನ್ನು ಉಲ್ಲೇಖಿಸಿದ ಅವರು, ಕನಸಿನಲ್ಲಿ ಕಂಡ ಸಾಧುವಿನ ಹುಡುಕಾಟದಲ್ಲಿ ಶಿರಡಿಗೆ ಬಂದ ಲಕ್ಷ್ಮೀಚಂದನ ಅನುಭವ, ಭಕ್ತಿಯಿಂದ ಸಿದ್ಧಪಡಿಸಿದ ಕಿಚಡಿಯನ್ನು ಬಾಬಾ ಸ್ವೀಕರಿಸಿದ ಘಟನೆ ಸೇರಿದಂತೆ ಹಲವು ಉದಾಹರಣೆಗಳ ಮೂಲಕ ಸಾಯಿಬಾಬಾ ಭಕ್ತನ ಮನಸ್ಸನ್ನು ಅರಿಯುವ ತ್ರಿಕಾಲಜ್ಞಾನಿ ಎಂಬುದನ್ನು ವಿವರಿಸಿದರು.

ಜ್ಯೋತಿಷ್ಯಕ್ಕಿಂತ ಸದ್ಗುರುಗಳ ಆಶೀರ್ವಾದವೇ ಶ್ರೇಷ್ಠ ಎಂಬುದನ್ನು ಪಾರ್ಸಿ ದಂಪತಿಯ ಕಥೆಯ ಮೂಲಕ ವಿವರಿಸಿದ ಅವರು, ಪರೀಕ್ಷೆಯಲ್ಲಿ ಯಶಸ್ಸು, ಜೀವನದಲ್ಲಿ ಸಂಕಷ್ಟ ನಿವಾರಣೆ ಸೇರಿದಂತೆ ಗುರುಕೃಪೆಯ ಮಹತ್ವವನ್ನು ಸಾಯಿ ಸಚ್ಚರಿತ್ರೆಯ ಪ್ರಸಂಗಗಳ ಮೂಲಕ ಮನಮುಟ್ಟುವಂತೆ ನಿರೂಪಿಸಿದರು.

ಪ್ರಸಾದ ಸೇವಾರ್ಥಿಗಳಾದ ಡಾ. ನಂದಿನಿ, ಡಾ. ನಿರಜ ಶೆಟ್ಟರ, ಹುಚ್ಚಣ್ಣ ಶಹಾಪೂರ, ಸುಭಾಷ ಪರಸನಾಯ್ಕರ್, ಜಗದೀಶಚಂದ್ರ ನಾಡಗೌಡ್ರ, ಸುಜಾತಾ ಯಾದವಾಡ, ಸುವರ್ಣಾ ಕಳಕಣ್ಣವರ, ಪಂಪನಗೌಡ ಹಾಗೂ ಕುಟುಂಬದ ಸದಸ್ಯರನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಲಾಯಿತು.

ಮಹೇಶಗೌಡ ತಲೇಗೌಡ್ರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಮೃತ ವಾಲಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಸತ್ಸಂಗ ಸಮಿತಿಯ ಪದಾಧಿಕಾರಿಗಳು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗ ವಹಿಸಿದ್ದರು.

> **ಭಕ್ತನು ಎಷ್ಟೇ ದೂರದಲ್ಲಿದ್ದರೂ ಸದ್ಗುರು ಸಾಯಿಬಾಬಾ ಅವನ ಮನದಾಳ ಅರಿತು ತನ್ನ ಬಳಿಗೆ ಸೆಳೆದು ತರುತ್ತಾರೆ. ಭಕ್ತಿ ಎಂದರೆ ಪೂಜೆಯಲ್ಲ, ಸಂಪೂರ್ಣ ಶರಣಾಗತಿ.**
>
> **- ಡಾ. ಎಸ್.ಬಿ. ಶೆಟ್ಟರ,** ಚಿಂತಕ ಹಾಗೂ ವೈದ್ಯ

# ತೋಂಟದಾರ್ಯ ಶಿಕ್ಷಣ ಸಂಸ್ಥೆಯಲ್ಲಿ ಕಲಿಯುವುದು ಹೆಮ್ಮೆಯ ಸಂಗತಿ

**ವಿಜಯಸಾಕ್ಷಿ ಸುದ್ದಿ, ಗದಗ**



ತೋಂಟದಾರ್ಯ ವಿದ್ಯಾಸಂಸ್ಥೆಗಳು ಗುಣಮಟ್ಟದ ಶಿಕ್ಷಣ, ಶಿಸ್ತು ಹಾಗೂ ಸಂಸ್ಕಾರಕ್ಕೆ ಹೆಸರುವಾಸಿಯಾಗಿದ್ದು, ಇಂತಹ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಲ್ಲಿ ವ್ಯಾಸಂಗ ಮಾಡುವುದು ಹಾಗೂ ಕಾರ್ಯನಿರ್ವಹಿಸುವುದು ಹೆಮ್ಮೆಯ ಸಂಗತಿಯಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ನಿವೃತ್ತ ಉಪನಿರ್ದೇಶಕ ಎ.ಎನ್. ನಾಗರಳ್ಳಿ ಹೇಳಿದರು.

ನಗರದ ತೋಂಟದಾರ್ಯ ಕಲ್ಯಾಣಕೇಂದ್ರದಲ್ಲಿ ನಡೆದ ತೋಂಟದ ಸಿದ್ದೇಶ್ವರ ವಿಜ್ಞಾನ, ವಾಣಿಜ್ಯ ಹಾಗೂ ಕಲಾ ಪದವಿಪೂರ್ವ ಮಹಾವಿದ್ಯಾಲಯದ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ, ಶೈಕ್ಷಣಿಕ ಚಟುವಟಿಕೆಗಳ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ತೋಂಟದ ಸಿದ್ದೇಶ್ವರ ಪಿಯು ಕಾಲೇಜು ಅತ್ಯುತ್ತಮ ಶೈಕ್ಷಣಿಕ ಫಲಿತಾಂಶ ದಾಖಲಿಸುತ್ತಿದ್ದು, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ದೇಶಪ್ರೇಮ ಹಾಗೂ ಉತ್ತಮ ಸಂಸ್ಕಾರವನ್ನು ಬೆಳೆಸಿಕೊಳ್ಳಬೇಕು. ಆಧುನಿಕ ತಂತ್ರಜ್ಞಾನವನ್ನು ಸದುಪಯೋಗಪಡಿಸಿಕೊಂಡು ಜೀವನದಲ್ಲಿ ಯಶಸ್ಸು ಸಾಧಿಸಬೇಕು ಎಂದು ಸಲಹೆ ನೀಡಿದರು.

ಹಿರಿಯ ನ್ಯಾಯವಾದಿ ಎಸ್.ಎಸ್. ಶೆಟ್ಟರ ಮಾತನಾಡಿ, ಪಿಯುಸಿ ಹಂತವು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಮಹತ್ವದ ಘಟ್ಟವಾಗಿದೆ. ಈ ಹಂತದಲ್ಲಿ ಗುರಿ ಸ್ಪಷ್ಟವಾಗಿದ್ದರೆ ಮುಂದಿನ ಬದುಕು ಸುಗಮವಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಭೈರನಟ್ಟಿ ವಿರಕ್ತಮಠದ ಶಾಂತಲಿಂಗ ಮಹಾಸ್ವಾಮಿಗಳು, ಶಾಲೆ-ಕಾಲೇಜುಗಳು ಆಧುನಿಕ ದೇವಾಲಯಗಳಾಗಿದ್ದು, ವಿದ್ಯಾರ್ಥಿಗಳು ಬಸವಾದಿ ಶರಣರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಶಿಕ್ಷಣವನ್ನು ಜೀವನದ ಆಸರೆಯನ್ನಾಗಿ ರೂಪಿಸಿಕೊಳ್ಳಬೇಕು ಎಂದು ಆಶೀರ್ವಚನ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ತೋಂಟದಾರ್ಯ ವಿದ್ಯಾಪೀಠದ ಕಾರ್ಯದರ್ಶಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ ಮಾತನಾಡಿ, ಕನ್ನಡದ ಕುಲಗುರು ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ನಾಡು-ನುಡಿ, ಸಾಹಿತ್ಯ ಹಾಗೂ ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅನನ್ಯವಾಗಿದೆ. ಉಪನ್ಯಾಸಕರು ತಮ್ಮ ಸಾಮಾಜಿಕ ಜವಾಬ್ದಾರಿಯನ್ನು ಅರಿತು ವಿದ್ಯಾರ್ಥಿಗಳ ವ್ಯಕ್ತಿತ್ವ ನಿರ್ಮಾಣಕ್ಕೆ ಶ್ರಮಿಸಬೇಕು ಎಂದರು.

ಕಾಲೇಜಿನ ಪ್ರಾಚಾರ್ಯ ವೈ.ಎಸ್. ಮತ್ತೂರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ತೋಂಟದಾರ್ಯ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ ವಿದ್ಯಾರ್ಥಿ ಪ್ರತಿನಿಧಿಗಳಿಗೆ ಪ್ರಮಾಣವಚನ ಬೋಧಿಸಿದರು. ಕು. ಉಮಾದೇವಿ ನಾಯ್ಕಲ್ ಪ್ರಾರ್ಥನೆ ನೆರವೇರಿಸಿದರು. ಎಸ್.ವಿ. ಕಡಗದ ಕಾರ್ಯಕ್ರಮ ನಿರೂಪಿಸಿದರು. ಪ್ರತಿಭಾ ಆರ್. ವಂದಿಸಿದರು.

ಈ ಸಂದರ್ಭದಲ್ಲಿ ಕಳೆದ ಶೈಕ್ಷಣಿಕ ವರ್ಷದಲ್ಲಿ ಅತ್ಯುತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಿಷಯವಾರು ಉತ್ತಮ ಸಾಧನೆ ಮಾಡಿದ ಉಪನ್ಯಾಸಕರಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಶ್ರೀಮಠದ ಭಕ್ತ ಅಮರೇಶ ಅಂಗಡಿ, ವಿದ್ಯಾರ್ಥಿ ಪ್ರತಿನಿಧಿಗಳಾದ ಭರತಕುಮಾರ ಬಿಳೆಯಲಿ, ಜಮುನಾ ಬಾವುಂಡ್ಲ, ಕರಿಷ್ಮಾ ಹುಡೇದ, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

> **ತೋಂಟದಾರ್ಯ ವಿದ್ಯಾಸಂಸ್ಥೆಗಳು ಕೇವಲ ಶಿಕ್ಷಣವನ್ನಷ್ಟೇ ಅಲ್ಲ, ಉತ್ತಮ ಸಂಸ್ಕಾರ ಮತ್ತು ಮೌಲ್ಯಗಳನ್ನೂ ಕಲಿಸುತ್ತವೆ. ಇಂತಹ ಸಂಸ್ಥೆಯಲ್ಲಿ ವ್ಯಾಸಂಗ ಮಾಡುವುದು ಪ್ರತಿಯೊಬ್ಬ ವಿದ್ಯಾರ್ಥಿಗೂ ಹೆಮ್ಮೆಯ ಸಂಗತಿ.**
>
> **- ಎ.ಎನ್. ನಾಗರಳ್ಳಿ,** ನಿವೃತ್ತ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ

### ಸಂಕ್ಷಿಪ್ತ ಸುದ್ದಿಗಳು

## ಆ,6, 7 ರಂದು ಗದಗ ಜಿಲ್ಲೆಗೆ ಉಪಲೋಕಾಯುಕ್ತರ ಭೇಟಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ದಾಖಲಾಗಿರುವ ವಿವಿಧ ದೂರುಗಳ ಪ್ರಗತಿ ಪರಿಶೀಲನೆ ಹಾಗೂ ಸಾರ್ವಜನಿಕ ಸಮಸ್ಯೆಗಳ ತ್ವರಿತ ಪರಿಹಾರಕ್ಕೆ ಒತ್ತು ನೀಡುವ ಉದ್ದೇಶದಿಂದ ಕರ್ನಾಟಕದ ಉಪಲೋಕಾಯುಕ್ತ ಕೆ.ಎನ್. ಫಣೀಂದ್ರ, ಅವರು ಶುಕ್ರವಾರ ಜಿಲ್ಲಾಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿದರು.

ಸಂವಾದದಲ್ಲಿ ಮಾತನಾಡಿದ ಅವರು, ಸಾರ್ವಜನಿಕರ ದೂರುಗಳಿಗೆ ಅಧಿಕಾರಿಗಳು ತ್ವರಿತವಾಗಿ ಸ್ಪಂದಿಸಬೇಕು. ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ಯಾವುದೇ ವಿಳಂಬವಿಲ್ಲದೆ ತಲುಪುವಂತೆ ಪ್ರಾಮಾಣಿಕತೆ ಮತ್ತು ಬದ್ಧತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಉಪಲೋಕಾಯುಕ್ತರು ಆಗಸ್ಟ್ 5ರಂದು ಗದಗ ಜಿಲ್ಲೆಗೆ ಆಗಮಿಸಲಿದ್ದು, ಆಗಸ್ಟ್ 6ರಂದು ಸಾರ್ವಜನಿಕರಿಂದ ದಾಖಲಾಗಿರುವ ದೂರುಗಳ ಪರಿಶೀಲನೆ ನಡೆಸಲಿದ್ದಾರೆ. ಆಗಸ್ಟ್ 7ರಂದು ಜಿಲ್ಲೆಯ ವಿವಿಧ ಸರ್ಕಾರಿ ಕಚೇರಿಗಳಿಗೆ ಅನಿರೀಕ್ಷಿತ ತಪಾಸಣೆ ಕೈಗೊಳ್ಳುವುದಾಗಿ ತಿಳಿಸಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಸರ್ಕಾರಿ ಕಚೇರಿಗಳಲ್ಲಿ ಸಮಯಪಾಲನೆ, ಶಿಸ್ತು ಮತ್ತು ಸ್ವಚ್ಛತೆಗೆ ಆದ್ಯತೆ ನೀಡಬೇಕು. ಸಾರ್ವಜನಿಕರಿಗೆ ಸೂಕ್ತ ಆಸನ ವ್ಯವಸ್ಥೆ ಸೇರಿದಂತೆ ಅಗತ್ಯ ಮೂಲಸೌಲಭ್ಯಗಳನ್ನು ಒದಗಿಸಬೇಕು. ಸರ್ಕಾರದ ಯೋಜನೆಗಳ ಅನುಷ್ಠಾನದಲ್ಲಿ ಯಾವುದೇ ಅನಗತ್ಯ ವಿಳಂಬವಾಗದಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ದೂರುಗಳು ಹಾಗೂ ಅವುಗಳ ವಿಲೇವಾರಿ ಕುರಿತು ಇಲಾಖಾವಾರು ಪ್ರಗತಿ ಪರಿಶೀಲನೆ ನಡೆಸಲಾಯಿತು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್, ಡಿವೈಎಸ್‌ಪಿ ಮಹಾಂತೇಶ ಸಜ್ಜನರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಧಾರವಾಡ ಜಿಲ್ಲೆಯಲ್ಲಿ ಶೇ.100 ಫಾರ್ಮ್ ವಿತರಣೆ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)–2026 ಅಡಿಯಲ್ಲಿ ಜಿಲ್ಲೆಯ ಎಲ್ಲ 16,21,961 ಮತದಾರರಿಗೆ ಗಣತಿ ಫಾಮ್‌ಗಳನ್ನು ಶೇ.100ರಷ್ಟು ವಿತರಣೆ ಮಾಡಲಾಗಿದೆ. ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಸ್ನೇಹಲ್ ಆರ್. ನೀಡಿರುವ ಮಾಹಿತಿಯಂತೆ, ಇದುವರೆಗೆ 11,45,601 ಫಾರ್ಮ್‌ಗಳ ಗಣಕೀಕರಣ ಪೂರ್ಣಗೊಂಡಿದ್ದು, ಇದು ಶೇ.70.63ರಷ್ಟು ಪ್ರಗತಿ ಸಾಧಿಸಿದೆ. ಪರಿಶೀಲನೆ ವೇಳೆ 84,778 ಶಾಶ್ವತ ವಲಸೆ, 38,123 ಮರಣ, 12,784 ದ್ವಿಪ್ರತಿ, 49,275 ಗೈರು ಹಾಗೂ 626 ಇತರೆ ಪ್ರಕರಣಗಳು ಸೇರಿದಂತೆ ಒಟ್ಟು 1,86,582 ಪ್ರಕರಣಗಳು ಗುರುತಿಸಲ್ಪಟ್ಟಿವೆ. ಮತಗಟ್ಟೆ ಮಟ್ಟದ ಅಧಿಕಾರಿಗಳು ಮನೆ–ಮನೆಗೆ ಭೇಟಿ ನೀಡಿದಾಗ ಮತದಾರರು ಭರ್ತಿ ಮಾಡಿದ ಗಣತಿ ಫಾರ್ಮ್‌ಗಳನ್ನು ನೀಡಿ ಸಹಕರಿಸುವಂತೆ ಜಿಲ್ಲಾಧಿಕಾರಿ ಮನವಿ ಮಾಡಿದ್ದಾರೆ

## ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಶೈಕ್ಷಣಿಕ ಸಾಲಿನಲ್ಲಿ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದ ಅವಕಾಶ ಕಲ್ಪಿಸುವ ಉದ್ದೇಶದಿಂದ ಅಲ್ಪಸಂಖ್ಯಾತರ ನಿರ್ದೇಶನಾಲಯವು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ (ಕೆಎಸ್‌ಒಯು)ದ ವಿವಿಧ ಪದವಿ, ಸ್ನಾತಕೋತ್ತರ, ಸರ್ಟಿಫಿಕೇಟ್ ಹಾಗೂ ಡಿಪ್ಲೊಮಾ ಕೋರ್ಸ್‌ಗಳ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಿದೆ.

ವಿಶ್ವವಿದ್ಯಾನಿಲಯವು ದೂರ ಶಿಕ್ಷಣ (ಆಫ್‌ಲೈನ್/ಡಿಸ್ಟೆನ್ಸ್ ಎಜುಕೇಶನ್) ವ್ಯವಸ್ಥೆಯಡಿ ಬಿ.ಎ., ಬಿ.ಕಾಂ., ಬಿ.ಎಸ್‌ಸಿ. ಸೇರಿದಂತೆ 9 ಪದವಿ ಕೋರ್ಸ್‌ಗಳು, ಎಂ.ಎ., ಎಂ.ಕಾಂ., ಎಂ.ಎಸ್‌ಸಿ., ಎಂ.ಬಿ.ಎ. ಸೇರಿದಂತೆ 34 ಸ್ನಾತಕೋತ್ತರ ಕೋರ್ಸ್‌ಗಳು, 4 ಪದವಿ ಸರ್ಟಿಫಿಕೇಟ್ ಕೋರ್ಸ್‌ಗಳು, 13 ಸ್ನಾತಕೋತ್ತರ ಸರ್ಟಿಫಿಕೇಟ್ ಕೋಸ್‌ಗಳು ಹಾಗೂ 7 ಡಿಪ್ಲೊಮಾ ಕೋರ್ಸ್‌ಗಳು ಸೇರಿದಂತೆ ಒಟ್ಟು 69 ಕೋರ್ಸ್‌ಗಳಲ್ಲಿ ಪ್ರವೇಶ ನೀಡಲಿದೆ.

ಮುಸ್ಲಿಂ, ಜೈನ್, ಕ್ರೈಸ್ತ, ಸಿಖ್, ಬೌದ್ಧ ಹಾಗೂ ಪಾರ್ಸಿ ಸಮುದಾಯದ ಅರ್ಹ ವಿದ್ಯಾರ್ಥಿಗಳು ಜುಲೈ 31ರೊಳಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅಗತ್ಯ ದಾಖಲೆಗಳೊಂದಿಗೆ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕೇಂದ್ರ ಕಚೇರಿ, ಸಮೀಪದ ಪ್ರಾದೇಶಿಕ ಕೇಂದ್ರ ಅಥವಾ ಬೆಂಗಳೂರಿನ ಹಜ್ ಭವನದಲ್ಲಿರುವ ವಿಶ್ವವಿದ್ಯಾನಿಲಯದ ಪ್ರಾದೇಶಿಕ ಕೇಂದ್ರಕ್ಕೆ ಭೇಟಿ ನೀಡಿ ಪ್ರವೇಶಾತಿ ಪ್ರಕ್ರಿಯೆ ಪೂರ್ಣಗೊಳಿಸಬಹುದು.

ಅರ್ಜಿದಾರರು ಕರ್ನಾಟಕದ ನಿವಾಸಿಯಾಗಿರಬೇಕು. ವಿದ್ಯಾರ್ಥಿ ಅಥವಾ ಪೋಷಕರ ವಾರ್ಷಿಕ ಆದಾಯ ₹8 ಲಕ್ಷ ಮೀರಿರಬಾರದು. ಆಯ್ಕೆ ಮಾಡಿಕೊಳ್ಳುವ ಕೋರ್ಸ್‌ಗೆ ವಿಶ್ವವಿದ್ಯಾನಿಲಯ ನಿಗದಿಪಡಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಹೊಂದಿರಬೇಕು.

ಈ ಯೋಜನೆಯ ಸೌಲಭ್ಯವು ಸರ್ಕಾರಿ ನೌಕರರಿಗೆ ಅನ್ವಯಿಸುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ 86905 44522, 99453 66062, 96113 51256, 96114 18726, 90353 95137, 81234 69017, 98440 10407 ಹಾಗೂ 82777 99990 ಸಂಖ್ಯೆಗಳನ್ನು ಸಂಪರ್ಕಿಸಬಹುದು ಎಂದು ಗದಗ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಮ್ಯಾನೋರ್ ಫಾರ್ಮ್‌ನಲ್ಲಿ 300ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ಸಹಜ ಕೃಷಿಯ ಪ್ರಾಯೋಗಿಕ ಪಾಠ | ವಿಷಮುಕ್ತ ಕೃಷಿಯ ಮಹತ್ವ ಮನವರಿಕೆ

# ನೆಮ್ಮದಿ ಕೃಷಿಯತ್ತ ವಿದ್ಯಾರ್ಥಿಗಳ ಕೃಷಿ ಪಯಣ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪುಸ್ತಕಗಳಲ್ಲಿ ಓದಿದ ಕೃಷಿಯನ್ನು ನೇರವಾಗಿ ಹೊಲದಲ್ಲಿ ಕಂಡು, ಮಣ್ಣಿನ ಸುವಾಸನೆ ಅನುಭವಿಸಿ, ಔಷಧೀಯ ಸಸ್ಯಗಳ ಉಪಯೋಗ ಅರಿತು, ವಿಷಮುಕ್ತ ಕೃಷಿಯ ಮಹತ್ವ ತಿಳಿದುಕೊಂಡ ಅಪರೂಪದ ಅನುಭವ 300ಕ್ಕೂ ಹೆಚ್ಚು ವಿದ್ಯಾರ್ಥಿಗಳಿಗೆ ದೊರೆಯಿತು.

ತಾಲ್ಲೂಕಿನ ಹೊಸಪೇಟೆ ರಸ್ತೆಯಲ್ಲಿರುವ ಮ್ಯಾನೋರ್ ಫಾರ್ಮ್ ನಲ್ಲಿ ಆಯೋಜಿಸಿದ್ದ ಕೃಷಿ ಅಧ್ಯಯನ ಪ್ರವಾಸದಲ್ಲಿ ಕೊಟ್ಟೂರಿನ ಇಂದು ಶಿಕ್ಷಣ ಸಂಸ್ಥೆಯ ಸಿಬಿಎಸ್‌ಇ ವಿಭಾಗದ 3ರಿಂದ 6ನೇ ತರಗತಿಯ 300ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ 20ಕ್ಕೂ ಹೆಚ್ಚು ಶಿಕ್ಷಕರು ಭಾಗವಹಿಸಿ ಮೂರು ಗಂಟೆಗಳ ಕಾಲ ನೆಮ್ಮದಿ ಕೃಷಿಯ ಕುರಿತು ಪ್ರಾಯೋಗಿಕ ಪಾಠಗಳನ್ನು ಕಲಿತರು.

ನೆಮ್ಮದಿ ಕೃಷಿ ಪದ್ಧತಿಯ ರೂವಾರಿಯಾಗಿರುವ ವಸಂತ ಮಾಲವಿ, ಕೃಷಿ ಎಂದರೆ ಕೇವಲ ಬೆಳೆಯಲ್ಲ, ಅದು ಆರೋಗ್ಯಕರ ಬದುಕಿನ ಅಡಿಪಾಯ ಎಂದು ವಿದ್ಯಾರ್ಥಿಗಳಿಗೆ ಮನದಟ್ಟು ಮಾಡಿಕೊಟ್ಟರು.

ತೋಟದಲ್ಲಿರುವ 58ಕ್ಕೂ ಹೆಚ್ಚು ಹಣ್ಣಿನ ಮರಗಳು, ಅಪರೂಪದ ಔಷಧೀಯ ಸಸ್ಯಗಳು ಹಾಗೂ ಕಳೆಗಳ ನಡುವೆಯೇ ಬೆಳೆಯುವ ಔಷಧಿ ಸಸ್ಯಗಳನ್ನು ತೋರಿಸಿ ಅವುಗಳ ಔಷಧೀಯ ಗುಣಗಳನ್ನು ವಿವರಿಸಿದರು. ವಿದ್ಯಾರ್ಥಿಗಳು ಕುತೂಹಲದಿಂದ ಪ್ರಶ್ನೆಗಳನ್ನು ಕೇಳಿದರೆ, ಶಿಕ್ಷಕರು



ಮತ್ತು ಮಕ್ಕಳು ಟಿಪ್ಪಣಿಗಳನ್ನು ಮಾಡಿಕೊಂಡು ಕೃಷಿ ಜ್ಞಾನವನ್ನು ಅಳವಡಿಸಿಕೊಂಡರು.

ನೆಮ್ಮದಿ ಕೃಷಿ ಪದ್ಧತಿಯಿಂದ ಕಳೆದ ಎಂಟು ವರ್ಷಗಳಲ್ಲಿ ಪಡೆದ ಅನುಭವ, ಮಣ್ಣಿನ ಫಲವತ್ತತೆ ಹೆಚ್ಚಿಸುವ ವಿಧಾನ, ಯಾವುದೇ ಉಳುಮೆ ಮಾಡದೆ ಹಾಗೂ ತರಗೆಲೆಗಳನ್ನು ತೆಗೆಯದೆ ಕೃಷಿ ಮಾಡುವ ವಿಶೇಷತೆಯನ್ನೂ ಮಾಲವಿ ವಿವರಿಸಿದರು.

ಮ್ಯಾನೋರ್ ಫಾರ್ಮ್‌ನ ಒಡತಿ ಚಂದ್ರಲೇಖಾ ಮಾಲವಿ, ಆರೋಗ್ಯಕರ ಆಹಾರಕ್ಕಾಗಿ ಸಾಂಪ್ರದಾಯಿಕ, ಸಹಜ, ನೈಸರ್ಗಿಕ ಹಾಗೂ ನೆಮ್ಮದಿ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದು ಅನಿವಾರ್ಯ ಎಂದು ಹೇಳಿದರು.

ತೋಟದ ಮಣ್ಣಿನಲ್ಲಿರುವ ಸಾವಯವ ಇಂಗಾಲದ ಪ್ರಮಾಣ, ಎಲೆಗಳ ಕೊಳೆತದಿಂದ ಮಣ್ಣಿನ ಫಲವತ್ತತೆ ಹೆಚ್ಚುವ ವಿಧಾನವನ್ನು ಮಾಲವಿ ದಂಪತಿ ವಿದ್ಯಾರ್ಥಿಗಳಿಗೆ ಪ್ರಾತ್ಯಕ್ಷಿಕೆ ಮೂಲಕ ತೋರಿಸಿದರು. ಹಲವು ವಿದ್ಯಾರ್ಥಿಗಳು ಮಣ್ಣಿನ ಸುವಾಸನೆಯನ್ನು ಅನುಭವಿಸಿ, ಸ್ವಲ್ಪ ಮಣ್ಣನ್ನು ಮನೆಗೆ ಕೊಂಡೊಯ್ದು ಪಾಲಕರಿಗೆ ತೋರಿಸುವ ಉತ್ಸಾಹ ಪ್ರದರ್ಶಿಸಿದ್ದು ಕಾರ್ಯಕ್ರಮದ ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ಮಾತನಾಡಿದ ಇಂದು ಶಿಕ್ಷಣ ಸಂಸ್ಥೆಯ ಪ್ರಾಂಶುಪಾಲ ಚೇತನ್ ಕುರ್ಮಾ, ಪುಸ್ತಕದ ಪಾಠಕ್ಕಿಂತ ಬದುಕಿನ ಪಾಠವನ್ನು ವಿದ್ಯಾರ್ಥಿಗಳಿಗೆ ನೀಡಿದ ಮ್ಯಾನೋರ್ ಫಾಮ್‌ಗೆ ಕೃತಜ್ಞತೆ ಸಲ್ಲಿಸಿದರು.

ಶಿಕ್ಷಕ ಜಗದೀಶ್ ಮಾತನಾಡಿ, ಕೃಷಿಯನ್ನು ಪ್ರೀತಿಯಿಂದ ಮಾಡಿದರೆ ವಯಸ್ಸು ಅಡ್ಡಿಯಾಗುವುದಿಲ್ಲ ಎಂಬುದನ್ನು ಮಾಲವಿ ದಂಪತಿ ತಮ್ಮ ಜೀವನದ ಮೂಲಕ ತೋರಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಕೊನೆಯಲ್ಲಿ ವಿದ್ಯಾರ್ಥಿಗಳು ತಮ್ಮ ಪಾಲಕರನ್ನೂ ಮ್ಯಾನೋರ್ ಫಾರ್ಮ್‌ಗೆ ಕರೆತರುವ ಭರವಸೆ ನೀಡಿದ್ದು, ಮಾಲವಿ ದಂಪತಿ ವಿಷಮುಕ್ತ ಕೃಷಿಯ ಸಂದೇಶದೊಂದಿಗೆ ಅವರನ್ನು ಬೀಳ್ಕೊಟ್ಟರು.

> **ಪಾಲಾಶ, ಅರ್ಜುನ, ಸೀತಾ ಅಶೋಕ, ರುದ್ರಾಕ್ಷಿ, ರಾಮಫಲ, ಲಕ್ಷ್ಮಣ ಫಲ ಸೇರಿದಂತೆ ಅನೇಕ ಔಷಧೀಯ ಹಾಗೂ ಹಣ್ಣಿನ ಸಸ್ಯಗಳ ಉಪಯೋಗವನ್ನು ಮಕ್ಕಳು ತಿಳಿದುಕೊಂಡಿದ್ದಾರೆ. ಪ್ರಕೃತಿಯೇ ನಮ್ಮ ಅತ್ಯುತ್ತಮ ಔಷಧಾಲಯ.**
> – **ಚಂದ್ರಲೇಖಾ ಮಾಲವಿ,** ಮ್ಯಾನೋರ್ ಫಾರ್ಮ್

> **ನಾವು ಏನನ್ನು ಬಿತ್ತುತ್ತೇವೆಯೋ ಅದನ್ನೇ ತಿನ್ನುತ್ತೇವೆ. ವಿಷ ಬಿತ್ತಿದರೆ ವಿಷವೇ ನಮ್ಮ ಊಟವಾಗುತ್ತದೆ. ಆರೋಗ್ಯಕರ ಬದುಕಿಗೆ ವಿಷಮುಕ್ತ ಕೃಷಿಯೇ ಏಕೈಕ ದಾರಿ.**
> – **ವಸಂತ ಮಾಲವಿ,** ನೆಮ್ಮದಿ ಕೃಷಿ ರೂವಾರಿ

ಮೊಟ್ಟೆ ದರ ಏರಿಕೆಯಿಂದ ಶಾಲೆಗಳಿಗೆ ಆರ್ಥಿಕ ಹೊರೆ | ಶಿಕ್ಷಕರ ಸಂಘದಿಂದ ಡಿಸಿಗೆ ಮನವಿ

## ಬಿಸಿಯೂಟಕ್ಕೆ ನೀಡುವ ಅನುದಾನ ಹೆಚ್ಚಿಸಿ



**ವಿಜಯಸಾಕ್ಷಿ ಸುದ್ದಿ, ಗದಗ**

ಶಾಲಾ ಬಿಸಿಯೂಟ ಯೋಜನೆಯಡಿ ನೀಡಲಾಗುತ್ತಿರುವ ಒಂದು ಮೊಟ್ಟೆಗೆ ₹6 ಅನುದಾನ ಪ್ರಸ್ತುತ ಮಾರುಕಟ್ಟೆ ದರಕ್ಕೆ ಹೊಂದಿಕೆಯಾಗುತ್ತಿಲ್ಲ. ಮೊಟ್ಟೆ ಖರೀದಿ, ಕುದಿಸುವುದು, ಸುಲಿಯುವುದು ಸೇರಿದಂತೆ ಹೆಚ್ಚುತ್ತಿರುವ ವೆಚ್ಚದಿಂದ ಶಾಲೆಗಳ ಮುಖ್ಯೋಪಾಧ್ಯಾಯರೇ ಆರ್ಥಿಕ ಹೊರೆ ಹೊರಬೇಕಾದ ಪರಿಸ್ಥಿತಿ ನಿರ್ಮಾಣವಾಗಿದ್ದು, ಅನುದಾನವನ್ನು ತಕ್ಷಣ ಹೆಚ್ಚಿಸಬೇಕು ಎಂದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಆಗ್ರಹಿಸಿದೆ.

ಈ ಕುರಿತು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಗದಗ ಗ್ರಾಮೀಣ ವಲಯ ಘಟಕವು ಜಿಲ್ಲಾಧ್ಯಕ್ಷ ವಿ.ಎಂ. ಹಿರೇಮಠ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರಿಗೆ ಶುಕ್ರವಾರ ಮನವಿ ಸಲ್ಲಿಸಿತು.

ಮನವಿಯಲ್ಲಿ, ಮೊಟ್ಟೆ ಹಾಗೂ ತರಕಾರಿ ದರಗಳು ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ ಬಿಸಿಯೂಟ ಯೋಜನೆ ಅನುಷ್ಠಾನದಲ್ಲಿ ಶಾಲೆಗಳು ಆರ್ಥಿಕ ಸಂಕಷ್ಟ ಎದುರಿಸುತ್ತಿವೆ ಎಂದು ತಿಳಿಸಲಾಗಿದೆ.

ಇದರೊಂದಿಗೆ SATS ತಾಂತ್ರಿಕ ಸಮಸ್ಯೆಯಿಂದ ವಿದ್ಯಾರ್ಥಿಗಳ ಮಾಹಿತಿ ಸಿಂಕ್ ಆಗದಿರುವುದನ್ನು ಸರಿಪಡಿಸಬೇಕು. ಎಲ್‌ಕೆಜಿ ಹಾಗೂ ಯುಕೆಜಿ ಮಕ್ಕಳ ಹಾಜರಾತಿ ದಾಖಲಾಗದ ಕಾರಣ ಅನುದಾನ ನಿರ್ವಹಣೆಯಲ್ಲಿ ಉಂಟಾಗುತ್ತಿರುವ ತೊಂದರೆ ನಿವಾರಿಸಬೇಕು. ಅಕ್ಷರ ದಾಸೋಹ ಯೋಜನೆಗೆ ಅಗತ್ಯ ದಾಸ್ತಾನುಗಳನ್ನು ಕಾಲಮಿತಿಯಲ್ಲಿ ಪೂರೈಸಬೇಕು ಎಂದು ಒತ್ತಾಯಿಸಲಾಗಿದೆ.

ಕಳೆದ ಬೇಸಿಗೆ ರಜೆಯಲ್ಲಿ ಭಾರತ ಜನಗಣತಿ ಸಮೀಕ್ಷೆ ಕಾರ್ಯದಲ್ಲಿ ಪಾಲ್ಗೊಂಡ ಶಿಕ್ಷಕರಿಗೆ ಬಾಕಿ ಇರುವ ಗೌರವಧನವನ್ನು ತಕ್ಷಣ ಬಿಡುಗಡೆ ಮಾಡಬೇಕು. ಗಳಿಕೆ ರಜೆ ಜಮಾ ಮಾಡುವ ಕುರಿತು ಸಂಬಂಧಿಸಿದ ಇಲಾಖೆಗೆ ಅಗತ್ಯ ನಿರ್ದೇಶನ ನೀಡುವಂತೆಯೂ ಮನವಿಯಲ್ಲಿ ಆಗ್ರಹಿಸಲಾಗಿದೆ.

ಮನವಿಯನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಡಿಡಿಪಿಐ ಆರ್.ಎಸ್. ಬುರಡಿ, ಜಿಲ್ಲಾ ಅಕ್ಷರ ದಾಸೋಹ ಅಧಿಕಾರಿ ಸರಸ್ವತಿ ಕನವಳ್ಳಿ ಹಾಗೂ ಪಿಎಂ ಪೋಷಣಾ ಯೋಜನೆ ಸಹಾಯಕ ನಿರ್ದೇಶಕ ಶಂಕರ ಹಡಗಲಿ ಅವರಿಗೆ ಸಲ್ಲಿಸಲಾಯಿತು. ಸಂಬಂಧಪಟ್ಟ ಇಲಾಖೆಯ ಗಮನ ಸೆಳೆದು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಅಧಿಕಾರಿಗಳು ಭರವಸೆ ನೀಡಿದರು.

## ಶಿರಹಟ್ಟಿ ರಸ್ತೆಗಳಿಗೆ ವಿಶೇಷ ಅನುದಾನ ಕೋರಿದ ಶಾಸಕ ಡಾ. ಚಂದ್ರು ಲಮಾಣಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**



ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಲಕ್ಷ್ಮೇಶ್ವರ, ಶಿರಹಟ್ಟಿ ಹಾಗೂ ಮುಂಡರಗಿ ಭಾಗಗಳ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗೆ ವಿಶೇಷ ಅನುದಾನ ಮಂಜೂರು ಮಾಡುವಂತೆ ಶಾಸಕ ಡಾ. ಚಂದ್ರು ಲಮಾಣಿ ಅವರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಅವರಿಗೆ ಮನವಿ ಸಲ್ಲಿಸಿದರು.

ಶುಕ್ರವಾರ ಬೆಂಗಳೂರಿನಲ್ಲಿ ಸಚಿವರನ್ನು ಭೇಟಿ ಮಾಡಿದ ಶಾಸಕರು, ಕ್ಷೇತ್ರದ ಅನೇಕ ಗ್ರಾಮಗಳ ಸಂಪರ್ಕ ರಸ್ತೆಗಳು ಹಲವು ವರ್ಷಗಳಿಂದ ಹಾಳಾಗಿದ್ದು, ದುರಸ್ತಿ ಕಾಮಗಾರಿ ನಡೆಯದ ಕಾರಣ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಮನವಿಯಲ್ಲಿ ವಿವರಿಸಿದ್ದಾರೆ.

ಮಳೆಗಾಲದಲ್ಲಿ ರಸ್ತೆಗಳು ಕೆಸರುಗುಂಡಿಗಳಾಗಿ, ಬೇಸಿಗೆಯಲ್ಲಿ ಧೂಳುಮಯವಾಗಿ ಮಾರ್ಪಡುತ್ತಿವೆ. ಇದರಿಂದ ಶಾಲಾ–ಕಾಲೇಜು ವಿದ್ಯಾರ್ಥಿಗಳು, ರೈತರು, ವ್ಯಾಪಾರಿಗಳು, ಗರ್ಭಿಣಿಯರು ಹಾಗೂ ತುರ್ತು ಆರೋಗ್ಯ ಸೇವೆ ಪಡೆಯುವ ರೋಗಿಗಳು ನಿತ್ಯ ಸಂಕಷ್ಟ ಎದುರಿಸುತ್ತಿದ್ದಾರೆ. ಕೃಷಿ ಉತ್ಪನ್ನಗಳನ್ನು ಮಾರುಕಟ್ಟೆಗೆ ಸಾಗಿಸಲು ರೈತರಿಗೆ ಹೆಚ್ಚುವರಿ ವೆಚ್ಚ ಹಾಗೂ ಸಮಯ ವ್ಯಯವಾಗುತ್ತಿದ್ದು, ಗ್ರಾಮೀಣ ಆರ್ಥಿಕ ಚಟುವಟಿಕೆಗಳ ಮೇಲೂ ಪ್ರತಿಕೂಲ ಪರಿಣಾಮ ಉಂಟಾಗಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಹಾಳಾಗಿರುವ ಗ್ರಾಮೀಣ ರಸ್ತೆಗಳ ಮರುನಿರ್ಮಾಣ, ಡಾಂಬರೀಕರಣ, ಅಗತ್ಯವಿರುವ ಕಡೆ ಸಿಸಿ ರಸ್ತೆ ನಿರ್ಮಾಣ ಹಾಗೂ ಗುಣಮಟ್ಟದ ರಸ್ತೆ ಕಾಮಗಾರಿಗಳಿಗೆ ವಿಶೇಷ ಅನುದಾನ ಮಂಜೂರು ಮಾಡುವಂತೆ ಶಾಸಕರು ಕೋರಿದ್ದಾರೆ.

ಮನವಿಯನ್ನು ಸ್ವೀಕರಿಸಿದ ಸಚಿವ ಈಶ್ವರ ಖಂಡ್ರೆ, ನಿಯಮಾನುಸಾರ ಪರಿಶೀಲಿಸಿ ರಸ್ತೆ ಅಭಿವೃದ್ಧಿಗೆ ಅಗತ್ಯ ಕ್ರಮ ಕೈಗೊಳ್ಳುವುದಾಗಿ ಭರವಸೆ ನೀಡಿದರು.

## ನೂತನ ಆರೋಗ್ಯಾಧಿಕಾರಿ ಡಾ. ಕೀರ್ತಿಹಾಸ ಹೆಚ್.ಪಿ. ಅಧಿಕಾರ ಸ್ವೀಕಾರ



**ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಮುಂಡರಗಿ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿಯಲ್ಲಿ ನೂತನ ತಾಲೂಕು ಆರೋಗ್ಯಾಧಿಕಾರಿಯಾಗಿ ಡಾ. ಕೀರ್ತಿಹಾಸ ಹೆಚ್.ಪಿ. ಅವರು ಅಧಿಕಾರ ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ವರ್ಗಾವಣೆಗೊಂಡ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಬೀಳ್ಕೊಡುಗೆ ನೀಡಿ, ನೂತನವಾಗಿ ಆಗಮಿಸಿದ ಅಧಿಕಾರಿಗಳನ್ನು ಸ್ವಾಗತಿಸಲಾಯಿತು.

ಕಾರ್ಯಕ್ರಮದಲ್ಲಿ ನೂತನ ತಾಲೂಕು ಆರೋಗ್ಯಾಧಿಕಾರಿ ಡಾ. ಕೀರ್ತಿಹಾಸ ಹೆಚ್.ಪಿ. ಅವರನ್ನು ಫಲ–ಪುಷ್ಪ ನೀಡಿ ಆತ್ಮೀಯವಾಗಿ ಬರಮಾಡಿಕೊಳ್ಳಲಾಯಿತು. ಈವರೆಗೆ ಪ್ರಭಾರ ತಾಲೂಕು ಆರೋಗ್ಯಾಧಿಕಾರಿಯಾಗಿ ಕಾರ್ಯನಿರ್ವಹಿಸಿದ್ದ ಡಾ. ಲಕ್ಷ್ಮಣ ಪೂಜಾರ ಹಾಗೂ ಕಲಕೇರಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಸಂತೋಷಗೌಡ ಪಾಟೀಲ ಅವರನ್ನು ಗೌರವಪೂರ್ವಕವಾಗಿ ಸನ್ಮಾನಿಸಿ ಬೀಳ್ಕೊಡಲಾಯಿತು.

ಅದೇ ರೀತಿ ವರ್ಗಾವಣೆಗೊಂಡ ಸಿಬ್ಬಂದಿ ಅಜಯ್ ಕುಮಾರ್ ಸಿಂಧೆ ಅವರಿಗೆ ಬೀಳ್ಕೊಡಲಾಯಿತು. ನೂತನವಾಗಿ ಆಗಮಿಸಿದ ಶ್ರೀಮತಿ ಮುಕ್ತಾ ರಾಜಗೋಳಿ ಹಾಗೂ ಡಾ. ಚಂದ್ರು ಹೊಸಮಠ (ಆರ್‌ಬಿಎಸ್‌ಕೆ) ಅವರನ್ನು ಸ್ವಾಗತಿಸಲಾಯಿತು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಡಾ. ಕೀರ್ತಿಹಾಸ ಹೆಚ್.ಪಿ., ಆರೋಗ್ಯ ಇಲಾಖೆಯ ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಿ, ಪರಸ್ಪರ ಸಹಕಾರ ಮತ್ತು ಸಮನ್ವಯದಿಂದ ತಾಲೂಕಿನ ಆರೋಗ್ಯ ಸೇವೆ ಮತ್ತಷ್ಟು ಉತ್ತಮಗೊಳಿಸಬೇಕು ಎಂದು ಕರೆ ನೀಡಿದರು. ಡಾ. ಲಕ್ಷ್ಮಣ ಪೂಜಾರ ಹಾಗೂ ಡಾ. ಸಂತೋಷಗೌಡ ಪಾಟೀಲ ಅವರು ಮಾತನಾಡಿ, ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಸಿಬ್ಬಂದಿ ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ತಾಲೂಕು ಹಿರಿಯ ಆರೋಗ್ಯ ಶಿಕ್ಷಣಾಧಿಕಾರಿ ಕೆ.ವಿ. ಬಡಿಗೇರ ನಿರೂಪಣೆ ಮಾಡಿದರು. ಹನುಮಾಕ್ಷಿ ಜೋಗಿನ ಸ್ವಾಗತಿಸಿದರು ಹಾಗೂ ಕಮಲಾಕ್ಷಿ ಚೌಡಕಿ ವಂದಿಸಿದರು.

ಈ ಸಂದರ್ಭದಲ್ಲಿ ತಾಲೂಕು ಆರೋಗ್ಯ ಶಿಕ್ಷಣಾಧಿಕಾರಿ ಮಂಜುಳಾ ಸಜ್ಜನರ, ನೌಕರರ ಸಂಘದ ಪ್ರಧಾನ ಕಾರ್ಯದರ್ಶಿ ಎಸ್.ಎಸ್. ಸರ್ವದೆ, ಆರ್‌ಬಿಎಸ್‌ಕೆ ವೈದ್ಯಾಧಿಕಾರಿ ಡಾ. ಜಹಂಗೀರ್ ಎಫ್. ಹಾರೋಗೇರಿ, ಆರೀಫ್ ಶೇಖ್ (ಬಿಪಿಎಂ) ಸೇರಿದಂತೆ ಆರೋಗ್ಯ ಇಲಾಖೆಯ ವೈದ್ಯಾಧಿಕಾರಿಗಳು, ಸಿಬ್ಬಂದಿ ಹಾಗೂ ತಾಲೂಕು ಆಸ್ಪತ್ರೆಯ ಸಿಬ್ಬಂದಿ ಉಪಸ್ಥಿತರಿದ್ದರು.

## ಇಂದು ಲಕ್ಷ್ಮೇಶ್ವರದಲ್ಲಿ ಪತ್ರಿಕಾ ದಿನಾಚರಣೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಲಕ್ಷ್ಮೇಶ್ವರ ತಾಲೂಕು ಘಟಕದ ವತಿಯಿಂದ ಜುಲೈ 25ರಂದು ಪತ್ರಿಕಾ ದಿನಾಚರಣೆ ವಿವಿಧ ಕಾರ್ಯಕ್ರಮಗಳೊಂದಿಗೆ ಆಚರಿಸಲಾಗುತ್ತಿದೆ.

ದಿನಾಚರಣೆಯ ಅಂಗವಾಗಿ ಬೆಳಿಗ್ಗೆ ಪಟ್ಟಣದ ಮಹಂತಿನ ಮಠದ ರುದ್ರಭೂಮಿಯಲ್ಲಿ ಸ್ವಚ್ಛತಾ ಕಾರ್ಯ ಹಮ್ಮಿಕೊಳ್ಳಲಾಗಿದ್ದು, ಬಳಿಕ ಬೆಳಿಗ್ಗೆ 11 ಗಂಟೆಗೆ ಸರ್ಕಾರಿ ಪ್ರೌಢಶಾಲೆಯಲ್ಲಿ ಪತ್ರಿಕಾ ದಿನಾಚರಣೆ ಸಮಾರಂಭ ನಡೆಯಲಿದೆ.

ಹೂವಿನ ಶಿಗ್ಲಿ ವಿರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಲಿದ್ದು, ತಹಸೀಲ್ದಾರ ಧನಂಜಯ್ ಎಂ. ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಘಟಕದ ಅಧ್ಯಕ್ಷ ಅಶೋಕ ಸೊರಟೂರ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸಂಘದ ಜಿಲ್ಲಾ ಅಧ್ಯಕ್ಷ ರಾಜು ಹೆಬ್ಬಳ್ಳಿ, ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ, ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ, ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚೌಡಿ, ಜಿಲ್ಲಾ ಕಾರ್ಯಕಾರಿಣಿ ಸದಸ್ಯ ಮಲ್ಲಿಕಾರ್ಜುನ ಕಳಸಾಪುರ, ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ, ಪಿಎಸ್‌ಐ ನಾಗರಾಜ ಗಡಾದ, ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ, ಕ್ಷೇತ್ರ ಶಿಕ್ಷಣಾಧಿಕಾರಿ ಶಿವರಾಜ ಸಿಮಿಕೇರಿ, ಗುರುರಾಜ ಪಾಟೀಲ ಕುಲಕರ್ಣಿ, ಗುರುರಾಜ ಹವಳದ ಹಾಗೂ ಮುಖ್ಯೋಪಾಧ್ಯಾಯ ಬಸವರಾಜ ಪಟ್ಟೇದ ಸೇರಿದಂತೆ ವಿವಿಧ ಗಣ್ಯರು ಭಾಗವಹಿಸಲಿದ್ದಾರೆ.

ಪತ್ರಕರ್ತರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಸಂಘದ ವತಿಯಿಂದ ಪ್ರಕಟಣೆಯಲ್ಲಿ ಕೋರಲಾಗಿದೆ.

## ತಪ್ಪು ಮಾಹಿತಿ ನೀಡಿದರೆ ಕ್ರಮ: ಡಿಸಿ ಎಚ್ಚರಿಕೆ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲಾ ಮಾನವ ಅಭಿವೃದ್ಧಿ ವರದಿ ಸಿದ್ಧಪಡಿಸುವಲ್ಲಿ ಇಲಾಖೆಗಳು ನಿಖರ ಮತ್ತು ವಿಶ್ವಾಸಾರ್ಹ ಮಾಹಿತಿಯನ್ನು ಒದಗಿಸಬೇಕು. ತಪ್ಪು ಮಾಹಿತಿ ನೀಡಿದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಎಚ್ಚರಿಕೆ ನೀಡಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಾನವ ಅಭಿವೃದ್ಧಿ ವರದಿ–2025 ಹಾಗೂ ಸಮಗ್ರ ಮತ್ತು ಸುಸ್ಥಿರ ಅಭಿವೃದ್ಧಿ ಯೋಜನೆ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಶಿಕ್ಷಣ, ಆರೋಗ್ಯ, ಪೌಷ್ಟಿಕತೆ ಹಾಗೂ ಮೂಲಸೌಕರ್ಯಗಳಿಗೆ ಸಂಬಂಧಿಸಿದ ಎಲ್ಲ ದತ್ತಾಂಶವನ್ನು ಮರುಪರಿಶೀಲಿಸಿ ಸಲ್ಲಿಸುವಂತೆ ಸೂಚಿಸಿದರು.

ಧಾರವಾಡ ಜಿಲ್ಲೆಯ ಮಾನವ ಅಭಿವೃದ್ಧಿ ಸೂಚ್ಯಂಕವನ್ನು ಸುಧಾರಿಸಲು ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು. ವಿಶೇಷವಾಗಿ ಶಿಕ್ಷಣ, ತಾಯಿ–ಮಕ್ಕಳ ಆರೋಗ್ಯ, ಪೌಷ್ಟಿಕ ಆಹಾರ, ಹಿಂದುಳಿದ ತಾಲೂಕುಗಳ ಮಾಹಿತಿ ಹಾಗೂ ಸರ್ಕಾರ ಬಿಡುಗಡೆ ಮಾಡಿದ ಅನುದಾನದ ವಿವರಗಳನ್ನು ನಿಖರವಾಗಿ ಸಲ್ಲಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಪ್ರೊಬೇಷನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಎ.ಐ. ಅತಿಥಿ ಶಿಕ್ಷಕರ ನೇಮಕಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಲಕ್ಕುಂಡಿಯ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಕೃತಕ ಬುದ್ಧಿಮತ್ತೆ (Artificial IntelligenceAI) ವಿಷಯ ಬೋಧನೆಗಾಗಿ 202627ನೇ ಶೈಕ್ಷಣಿಕ ವರ್ಷದ ಅತಿಥಿ ಶಿಕ್ಷಕರ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಹೊರಡಿಸಿರುವ ಸುತ್ತೋಲೆಯಂತೆ, ರಾಷ್ಟ್ರೀಯ ಶಿಕ್ಷಣ ನೀತಿಯಡಿ ವಿದ್ಯಾರ್ಥಿಗಳಲ್ಲಿ 21ನೇ ಶತಮಾನದ ತಾಂತ್ರಿಕ ಜ್ಞಾನ, ಸಮಸ್ಯೆ ಪರಿಹಾರ ಸಾಮರ್ಥ್ಯ ಹಾಗೂ ಉದ್ಯೋಗಾರ್ಹತೆ ಬೆಳೆಸುವ ಉದ್ದೇಶದಿಂದ ಎ.ಐ. ವೃತ್ತಿಪರ ಕೌಶಲ್ಯ ಶಿಕ್ಷಣ ಬೋಧಿಸಲು ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸಂಬಂಧಿತ ಐಟಿ ವಲಯದಲ್ಲಿ ಕನಿಷ್ಠ ಒಂದು ವರ್ಷದ ಅನುಭವ ಹೊಂದಿರಬೇಕು. ಐಟಿ ಲ್ಯಾಬ್ ಉಪಕರಣಗಳ ಬಳಕೆ, ತಾಂತ್ರಿಕ ಸುರಕ್ಷತೆ ಹಾಗೂ ನೈರ್ಮಲ್ಯ ಕ್ರಮಗಳ ಕುರಿತು ಮೂಲಭೂತ ಜ್ಞಾನ ಹೊಂದಿರುವುದರ ಜೊತೆಗೆ ವಿದ್ಯಾರ್ಥಿಗಳಿಗೆ ತರಬೇತಿ ಹಾಗೂ ಪ್ರಾಯೋಗಿಕ ಬೋಧನೆ ನೀಡಲು ಅಗತ್ಯವಾದ ಗಣಕಯಂತ್ರ ಕೌಶಲ್ಯವೂ ಇರಬೇಕು.

ಅರ್ಜಿ ಸಲ್ಲಿಸಲು ಜುಲೈ 27 ಕೊನೆಯ ದಿನವಾಗಿದೆ. ಅರ್ಹ ಅಭ್ಯರ್ಥಿಗಳು ಲಕ್ಕುಂಡಿಯ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಜೆ.ಆರ್. ಶೆಟ್ಟರ ಅವರನ್ನು ಮೊಬೈಲ್ ಸಂಖ್ಯೆ 94800 67702 ಮೂಲಕ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka